# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 51 RNI Number : KNKAN/25/A2770 25-02-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :51 ರಾಯಚೂರು 25-02-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563


## ಖಾಲಿ ಹುದ್ದೆಗಳ ಭರ್ತಿ ಪ್ರಕ್ರಿಯೆ ಪ್ರಗತಿಯಲ್ಲಿದೆ, ಕಾಲಮಿತಿಯೊಳಗೆ ನೇಮಕಾತಿ : ಸಿಎಂ

ಬೆಂಗಳೂರು: ಸರ್ಕಾರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಪಾರದರ್ಶಕವಾಗಿ, ವ್ಯವಸ್ಥಿತವಾಗಿ ಮತ್ತು ಕಾಲಮಿತಿಯೊಳಗೆ ನೇಮಕಾತಿ ಮಾಡುವುದಾಗಿ ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಧಾರವಾಡದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಯುವ ಸಮುದಾಯದ ಪ್ರತಿಭಟನೆ ಹಿನ್ನೆಲೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಸಿಎಂ ಸಿದ್ದರಾಮಯ್ಯ, ಮುಂಬರುವ ವರ್ಷಗಳಲ್ಲಿ ಹೆಚ್ಚಿನ ಹುದ್ದೆಗಳಿಗೆ ನೇಮಕಾತಿ ಮಾಡಲು ಮತ್ತು ಇಂತಹ ಬಾಕಿ ಹುದ್ದೆಗಳು ಮರುಕಳಿಸದಂತೆ ನೇಮಕಾತಿ ಸಂಸ್ಥೆಗಳನ್ನು ಬಲಪಡಿಸಲು ನಾವು ಎಲ್ಲಾ ಅಗತ್ಯ ಆಡಳಿತಾತ್ಮಕ ಮತ್ತು ನೀತಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ ಎಂದಿದ್ದಾರೆ.

ಧಾರವಾಡದಲ್ಲಿ ಸರ್ಕಾರಿ ಉದ್ಯೋಗಾಕಾಂಕ್ಷಿಗಳು ನಡೆಸುತ್ತಿರುವ ಪ್ರತಿಭಟನೆಯನ್ನು ನಾನು ಗಂಭೀರವಾಗಿ ಪರಿಗಣಿಸಿದ್ದೇನೆ. ನಮ್ಮ ಅನೇಕ ಸರ್ಕಾರಿ ಉದ್ಯೋಗಾಕಾಂಕ್ಷಿಗಳು ಅನುಭವಿಸುತ್ತಿರುವ ಆತಂಕ, ಹತಾಶೆ ಮತ್ತು ಅನಿಶ್ಚಿತತೆಯನ್ನು ನಾನು ಅರ್ಥ ಮಾಡಿಕೊಂಡಿದ್ದೇನೆ. ಪ್ರತಿಯೊಂದು ಅರ್ಜಿಯ ಹಿಂದೆ ಒಂದು ಕನಸು, ಒಂದು ಕುಟುಂಬದ ಭರವಸೆ, ವರ್ಷಗಳ ಪರಿಶ್ರಮ ಮತ್ತು ಕರ್ನಾಟಕಕ್ಕೆ ಸೇವೆ ಸಲ್ಲಿಸಬೇಕೆಂಬ ಹಂಬಲವಿರುತ್ತದೆ. ಮುಖ್ಯಮಂತ್ರಿಯಾಗಿ, ನಾನು ಪ್ರತಿಯೊಬ್ಬ ವಿದ್ಯಾರ್ಥಿಗೂ ಹೇಳಬಯಸುವುದೇನೆಂದರೆ, ನಿಮ್ಮ ಕಾಳಜಿಗಳು ನಮಗೆ ಕೇಳಿಸುತ್ತಿವೆ ಮತ್ತು ನಿಮ್ಮ ಭವಿಷ್ಯ ನಮಗೆ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದ್ದಾರೆ.



ಬಿಜೆಪಿ ನಿಷ್ಕ್ರಿಯತೆಯೇ ಖಾಲಿ ಹುದ್ದೆಗೆ ಕಾರಣ : ನಾವು ಅಧಿಕಾರಕ್ಕೆ ಬಂದಾಗ 2.64 ಲಕ್ಷಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳು ಖಾಲಿ ಇದ್ದವು. ಈ ಬೃಹತ್ ಬಾಕಿ ಹುದ್ದೆಗಳು ರಾತ್ರೋರಾತ್ರಿ ಸೃಷ್ಟಿಯಾದದ್ದಲ್ಲ. ಇದು ಹಿಂದಿನ ಬಿಜೆಪಿ ಸರ್ಕಾರದ ಸುದೀರ್ಘ ನಿಷ್ಕ್ರಿಯತೆಯ ಫಲವಾಗಿದೆ. ಅವರು ಸಕಾಲದಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಆರಂಭಿಸಲು ಒಂದು ವ್ಯವಸ್ಥಿತ ಕ್ರಿಯಾಯೋಜನೆಯನ್ನು ರೂಪಿಸಲು ವಿಫಲವಾಗಿದ್ದರು. ಬಿಜೆಪಿ ನಾಯಕರು ತಮ್ಮ ರಾಜಕೀಯ ಹಿತಾಸಕ್ತಿಗಾಗಿ ಮುಗ್ಧ ವಿದ್ಯಾರ್ಥಿಗಳನ್ನು ದಾರಿ ತಪ್ಪಿಸುತ್ತಿರುವುದು ಅತ್ಯಂತ ದುರದೃಷ್ಟಕರ. ಅಭ್ಯರ್ಥಿಗಳು ತಮ್ಮ ತಯಾರಿ ಮತ್ತು ಭವಿಷ್ಯದ ಮೇಲೆ ಗಮನಹರಿಸುವಂತೆ ಹೇಳುವ ಬದಲು, ಅವರು ಅಶಾಂತಿ ಮೂಡಿಸಲು ಯತ್ನಿಸುತ್ತಿದ್ದಾರೆ ಎಂದು ಸಿಎಂ ಆರೋಪಿಸಿದ್ದಾರೆ.

ಈಗ ಎದುರಾಗಿರುವ ಪರಿಸ್ಥಿತಿಗೆ 2019 ಮತ್ತು 2023ರ ನಡುವೆ ನಡೆದ ನೇಮಕಾತಿ ಅಕ್ರಮಗಳು ಮತ್ತು ಭ್ರಷ್ಟಾಚಾರದ ಹಗರಣಗಳ ಪರಿಣಾಮವಾಗಿದೆ. ಇದು ಬೃಹತ್ ಪ್ರಮಾಣದ ಹುದ್ದೆಗಳು ಬಾಕಿ ಉಳಿಯುವಂತೆ ಮಾಡಿವೆ. ನೇಮಕಾತಿ ಪ್ರಕ್ರಿಯೆಯಲ್ಲಿ ವಿಶ್ವಾಸಾರ್ಹತೆ, ಪಾರದರ್ಶಕತೆ ಮತ್ತು ಸ್ಥಿರತೆಯನ್ನು ಮರುಸ್ಥಾಪಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಒಳ ಮೀಸಲಾತಿಗೆ ಸಂಬಂಧಿಸಿದ ಕಾನೂನು ಸವಾಲುಗಳು ನ್ಯಾಯಾಲಯಗಳ ಮುಂದೆ ಇದ್ದು, ಹಲವಾರು ನೇಮಕಾತಿ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕಾಯಿತು. ಸಾವಿರಾರು ಅಭ್ಯರ್ಥಿಗಳ ವೃತ್ತಿಜೀವನಕ್ಕೆ ಧಕ್ಕೆ ತರುವಂತಹ ಆತುರದ ನಿರ್ಧಾರಗಳನ್ನು ತೆಗೆದುಕೊಳ್ಳುವ ಬದಲು, ಕಾನೂನಿನ ಚೌಕಟ್ಟಿನೊಳಗೆ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಲು ನಿರ್ಧರಿಸಿದ್ದೇವೆ ಎಂದು ವಿವರಿಸಿದ್ದಾರೆ.

40 ಸಾವಿರಕ್ಕೂ ಅಧಿಕ ನೇಮಕಾತಿ ಪೂರ್ಣ : ಕಳೆದ 2.5 ವರ್ಷಗಳಲ್ಲಿಯೇ ವಿವಿಧ ಇಲಾಖೆಗಳಲ್ಲಿ 40,000ಕ್ಕೂ ಹೆಚ್ಚು ನೇಮಕಾತಿಗಳನ್ನು ಪೂರ್ಣಗೊಳಿಸಲಾಗಿದೆ. ನಮ್ಮ ನಿಯಂತ್ರಣ ಮೀರಿ ಉಂಟಾದ ವಿಳಂಬಗಳಿಂದಾಗಿ ಅನೇಕ ಆಕಾಂಕ್ಷಿಗಳು ಸರ್ಕಾರಿ ಉದ್ಯೋಗಗಳಿಗೆ ವರ್ಷಗಳಿಂದ ಕಾಯುತ್ತಿರುವ ಬಗ್ಗೆ ನಮಗೆ ಅರಿವಿದೆ. ಈ ಸಂಕಷ್ಟವನ್ನು ಅರಿತು, ಮುಂಬರುವ ನೇಮಕಾತಿಗಳಿಗಾಗಿ ಸರ್ಕಾರ ವಯೋಮಿತಿಯನ್ನು 5 ವರ್ಷಗಳವರೆಗೆ ಸಡಿಲಿಸಿದೆ. ಇದರ ಮೂಲಕ ವಿಳಂಬದಿಂದಾಗಿ ಅರ್ಹ ಅಭ್ಯರ್ಥಿಗಳು ಅನ್ಯಾಯವಾಗಿ ಅವಕಾಶ ವಂಚಿತರಾಗದಂತೆ ನೋಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಎಲ್ಲಾ ಅಭ್ಯರ್ಥಿಗಳು ಆತ್ಮವಿಶ್ವಾಸ ಮತ್ತು ತಾಳ್ಮೆಯಿಂದ ನಿಮ್ಮ ಶಿಕ್ಷಣ, ಕೌಶಲ್ಯ ವೃದ್ಧಿ ಮತ್ತು ತಯಾರಿಯತ್ತ ಗಮನಹರಿಸಬೇಕೆಂದು ನಾನು ಮನವಿ ಮಾಡುತ್ತೇನೆ. ಕರ್ನಾಟಕದ ಯುವಜನತೆಯೇ ನಮ್ಮ ಭವಿಷ್ಯದ ಶಿಲ್ಪಿಗಳು. ನಿಮ್ಮ ಪರಿಶ್ರಮ ನಮಗೆ ಸ್ಫೂರ್ತಿ ನೀಡುತ್ತದೆ. ನನ್ನ ಸರ್ಕಾರ ಕೇವಲ ಮಾತುಗಳಲ್ಲಿ ಮಾತ್ರವಲ್ಲದೆ, ಕಾರ್ಯರೂಪದಲ್ಲೂ ನಿಮ್ಮೊಂದಿಗೆ ದೃಢವಾಗಿ ನಿಲ್ಲುತ್ತದೆ. ನಿಮ್ಮ ಕನಸುಗಳನ್ನು ರಕ್ಷಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ.

## ರಸಗೊಬ್ಬರಗಳ ಅತಿಯಾದ ಬಳಕೆಯನ್ನು ಹಂತಹತವಾಗಿ ಕಡಿಮೆ ಮಾಡಿ: ಪತಂಗೆ ಜಯವಂತ್ ರಾವ್ ಸಲಹೆ

ರಾಯಚೂರು ಫೆಬ್ರವರಿ 24

ಮಣ್ಣಿನ ಆರೋಗ್ಯ ಕಾಪಾಡಲು ಮತ್ತು ದೀರ್ಘಕಾಲೀನ ಉತ್ಪಾದಕತೆ ಸಾಧಿಸಲು ರಾಸಾಯನಿಕ ರಸಗೊಬ್ಬರಗಳ ಅತಿಯಾದ ಬಳಕೆಯನ್ನು ಹಂತಹತವಾಗಿ ಕಡಿಮೆ ಮಾಡಿ ಸಮತೋಲನಯುತ ಮತ್ತು ಪರಿಸರ ಸ್ನೇಹಿ ಕೃಷಿ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು. ಶಾಶ್ವತ ಕೃಷಿ ಪದ್ಧತಿಗಳ ಅಗತ್ಯತೆಯನ್ನು ಅರಿಯಬೇಕು ಎಂದು ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಪತಂಗೆ ಜಯವಂತ್ ರಾವ್ ಅವರು ಹೇಳಿದರು.

ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘ ನಿ.ರಾಯಚೂರಿನ ಸಭಾಂಗಣದಲ್ಲಿ ಫೆ.24ರಂದು ನಡೆದ ಭವ್ಯ ಅಧೀಕೃತ ಮಾರಾಟಗಾರ (ಡೀಲರ್ಸ್) ಸಮಾವೇಶದಲ್ಲಿ ಅವರು ಮಾತನಾಡಿದರು.

ನಫೇಡ್ ನಿರ್ದೇಶಕರಾಗಿದ್ದ ವೇಳೆ ನಿರ್ವಹಿಸಿದ ಕಾರ್ಯಗಳ ಬಗ್ಗೆ ಸ್ಮರಿಸಿದ ಅವರು, ಕಳೆದ ವರ್ಷ ಆರಂಭದಲ್ಲಿ ಯೂರಿಯಾ ಮತ್ತು ಡಿಎಪಿ ರಸಗೊಬ್ಬರಗಳ



ತೀವ್ರ ಕೊರತೆಯಾಗಿತ್ತು. ರಾಯಚೂರು ಜಿಲ್ಲೆಯ ರೈತರಿಗೆ ಸಮರ್ಪಕ ಪ್ರಮಾಣದ ಯೂರಿಯಾ ಡಿ.ಎ.ಪಿ ಇತರೆ ರಸಗೊಬ್ಬರಗಳ ಸರಬರಾಜು ಆಗುವಂತೆ ಮಾಡಲು ಕೇಂದ್ರ ಸಚಿವರು ಹಾಗೂ ತಮ್ಮ ಸಹೋದ್ಯೋಗಿ ಮಿತ್ರರೊಂದಿಗೆ ನಿರಂತರ ಪ್ರಯತ್ನಿಸಿದ್ದರಿಂದಾಗಿ ಸಮರ್ಪಕ ಪ್ರಮಾಣದ ರಸಗೊಬ್ಬರವನ್ನು ಜಿಲ್ಲೆಗೆ ಪೂರೈಸಲು ಸಾಧ್ಯವಾಯಿತು ಎಂದು ಅವರು ಹೇಳಿದರು.

ಕೃಷಿ ಹಂಗಾಮಿನಲ್ಲಿ ರೈತರಿಗೆ ಯಾವುದೇ ತೊಂದರೆ ಆಗದಂತೆ ಈ ಹಿಂದ ಸಂಘಕ್ಕೆ ರಾಯಚೂರು-ಯಾದಗಿರಿ ಸಂಸದರಾದ ಜಿ.ಕುಮಾರ್ ನಾಯಕ್ ಮತ್ತು ಸ್ಥಳೀಯ ಕೃಷಿ ಇಲಾಖೆ ಅಧಿಕಾರಿಗಳ ಸಭೆಯನ್ನು ಕರೆದು ಸಮರ್ಪಕ ರಸಗೊಬ್ಬರ ಸರಬರಾಜು ದಾಸ್ತನು ಕ್ರಮ ಕೈಗೊಳ್ಳಲಾಗಿದೆ. ಇದನ್ನು ಈ ಮುಂದೆಯು ಕೂಡ ಅಳವಡಿಸಿ ಕೊಳ್ಳಲಾಗುವುದು. ಮುಂದಿನ ಕೃಷಿ ಹಂಗಾಮಿನಲ್ಲಿ ಸಮಯಕ್ಕೆ ಸರಿಯಾಗಿ ರಸಗೊಬ್ಬರ ಲಭ್ಯತೆಗೆ ಒತ್ತು ಕೊಡಲಾಗವುದು ಎಂದು ಅವರು ತಿಳಿಸಿದರು.

ಸಹಕಾರ ಸಂಘಗಳ ಉಪನಿಬಂಧಕರಾದ ಎಂ.ಆರ್.ಮನೋಹರ್ ಅವರು ಮಾತನಾಡಿ, ನಮ್ಮ ಸಹಕಾರ ಇಲಾಖೆಯ ಕೃಷಿಕ ಭಾರತಿ ಕೋ-ಆಪರೇಟೀವ್ ನಿಯಮಿತ (ಕ್ರಿಬ್ಕೋ) ಇಂದು ದೇಶದಲ್ಲಿ ಅತ್ಯಂತ ಹೆಚ್ಚಿನ ಪ್ರಮಾಣದ ರಸಗೊಬ್ಬರ ಉತ್ಪಾದಿಸುವ ಬೃಹತ್ ಕೈಗಾರಿಕೆಯಾಗಿ ಬೆಳೆದಿರುವುದು ಹೆಮ್ಮೆಯ ಸಂಗತಿಯಾಗಿದೆ. ರೈತರು ಮಣ್ಣಿನ ಪರೀಕ್ಷೆಗೆ ಗಮನ ಹರಿಸಬೇಕು. ವಲಯದ ಮಣ್ಣಿಗೆ ಅನುಗುಣವಾಗಿ ಗೊಬ್ಬರದ ಬಳಕೆಯಿಂದ ಬೆಳೆಯ ಆರೋಗ್ಯವನ್ನು

3ನೇ ಪುಟಕ್ಕೆ

## ಮೂಲಸೌಲಭ್ಯ ಕಲ್ಪಿಸಲು ಒತ್ತಾಯಿಸಿ ಹಾಸ್ಟೆಲ್ ವಿದ್ಯಾರ್ಥಿಗಳಿಂದ ಮಧ್ಯರಾತ್ರಿ ಪ್ರತಿಭಟನೆ



ರಾಯಚೂರು : ರಾಯಚೂರಿನ ಬೀಜನಗೇರಾ ರಸ್ತೆಯ ತಿರುಮಲ ಲೇಔಟ್ ನಲ್ಲಿರುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ವೃತ್ತಿಪರ ಬಾಲಕರ ವಸತಿ ನಿಲಯದಲ್ಲಿ ಮೂಲಸೌಕರ್ಯ ಕಲ್ಪಿಸಲು ಒತ್ತಾಯಿಸಿ ವಿದ್ಯಾರ್ಥಿಗಳು ಸೋಮವಾರ ಮಧ್ಯರಾತ್ರಿ ಪ್ರತಿಭಟನೆ ನಡೆಸಿದರು.

ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ಸರಿಯಾದ ಬೆಡ್ ಗಳಿಲ್ಲ, ಕುಡಿಯುವ ನೀರಿನ ಸಮಸ್ಯೆ, ಸ್ನಾನ ಮಾಡಲು ಬಿಸಿ ನೀರಿನ ವ್ಯವಸ್ಥೆ, ಬಕೇಟ್ ಗಳಿಲ್ಲದೇ ಸಮಸ್ಯೆಯಾಗಿದೆ. ಗಣಕಯಂತ್ರ, ಸ್ಪರ್ಧಾತ್ಮಕ ಪರೀಕ್ಷೆಗೆ ಅಗತ್ಯವಾದ ಪುಸ್ತಕ, ದಿನ ಪತ್ರಿಕೆಗಳು, ಕ್ರೀಡಾ ಸಾಮಗ್ರಿಗಳು ನೀಡಬೇಕೆಂದು ಒತ್ತಾಯಿಸಿದರು.

ವಸತಿ ನಿಲಯದಲ್ಲಿರುವ ಶೌಚಾಲಯಗಳನ್ನು ಸರಿಯಾದ ಸಮಯಕ್ಕೆ ಸ್ವಚ್ಛಗೊಳಿಸದೆ ಬೇಜವಾಬ್ದಾರಿ ತೋರುತ್ತಾರೆ. ಇದರಿಂದ ಹಾಸ್ಟೆಲ್‌ಗಳಲ್ಲಿ ವಾಸಿಸುವ ವಿದ್ಯಾರ್ಥಿಗಳ ಆರೋಗ್ಯದ ಮೇಲೆ ಪರಿಣಾಮ ಬೀರಿದೆ. ಈ ಬಗ್ಗೆ ಹಲವು ಬಾರಿ ಮನವಿ ಮಾಡಿದ್ದರೂ ಆಡಳಿತ ಮಂಡಳಿಗೆ ತಿಳಿಸಿದರೂ ಅಧಿಕಾರಿಗಳು ಗಂಭೀರವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ವಿಷಯ ತಿಳಿದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ ಭೇಟಿ ನೀಡಿ ವಾರದೊಳಗೆ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು. ಬಳಿಕ ವಿದ್ಯಾರ್ಥಿಗಳು ಹೋರಾಟ ಹಿಂಪಡೆದರು.

ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳಾದ ಹನುಮೇಶ ನಾಯಕ, ಸ್ವಾಮಿ ನಾಯಕ, ಕೆ. ನಾಗರಾಜ ನಾಯಕ, ಮಹೇಶ ನಾಯಕ, ನರಸಪ್ಪ ನಾಯಕ, ವೆಂಕಟೇಶ, ಕೃಷ್ಣ, ರವಿಚಂದ್ರ, ಉರುಕುಂದ, ವಿನೋದ, ಶಿವು ಸೇರಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು

### ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವಕ್ಕೆ ಚಾಲನೆ

## ದೈಹಿಕ, ಮಾನಸಿಕ ಸದೃಢತೆಗೆ ನೌಕರರಿಗೆ ಕ್ರೀಡೆಗಳು ಅತ್ಯಗತ್ಯ : ಸಿಇಓ ಸಲಹೆ



ರಾಯಚೂರು ಫೆಬ್ರವರಿ 24

ಸಾರ್ವಜನಿಕ ಸೇವೆಯಲ್ಲಿ ತೊಡಗಿರುವ ಸರ್ಕಾರಿ ನೌಕರರು ಕೆಲಸ ಮಧ್ಯೆಯೇ ಕ್ರೀಡಾಚಟುಟಿಕೆಗಳಲ್ಲಿ ಭಾಗವಹಿಸಿ, ಮಾನಸಿಕ ಮತ್ತು ದೈಹಿಕ ಸದೃಢತೆ ಸಾಧಿಸಬೇಕೆಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸಲಹೆ ನೀಡಿದರು.

ಫೆ.24ರ ಮಂಗಳವಾರ ದಂದು ನಗರದ ಕೃಷಿ ವಿಶ್ವವಿದ್ಯಾಲಯ ಕ್ರೀಡಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಯುವಜನಸೇವಾ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಸೋಲು-ಗೆಲುವು ಸಹಜ. ಪ್ರತಿಯೊಬ್ಬರು ಕ್ರೀಡಾ ಮನೋಭಾವನೆಯೊಂದಿಗೆ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಬದಲಾದ ಜೀವನ ಶೈಲಿ ಮತ್ತು ಆಹಾರ ಕ್ರಮಗಳಿಂದ ಒತ್ತಡ ಉಂಟಾಗುವುದು ಸಾಮಾನ್ಯವಾಗಿದೆ. ಹೀಗಾಗಿ ಪ್ರತಿ ನಿತ್ಯ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿ ಆರೋಗ್ಯ ಕಾಪಾಡಿಕೊಳ್ಳಬೇಕು. ಹೀಗಾಗಿ ಎರಡು ದಿನಗಳ ಕಾಲ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ. ಅವಕಾಶ ಸಿಕ್ಕಾಗ ಇದೆ ರೀತಿಯಲ್ಲಿ ಕ್ರೀಡೆಗಳನ್ನು ಏರ್ಪಡಿಸಿ, ನೌಕರರು ಮತ್ತು ಸಿಬ್ಬಂದಿಗಳನ್ನು ಪ್ರೋತ್ಸಾಹಿಸಲಾಗುವುದು ಎಂದರು.

ಸರ್ಕಾರಿ ನೌಕರರು ಮುಖ್ಯವಾಗಿ ಜನಸಾಮಾನ್ಯರ ನಿರೀಕ್ಷೆಯಂತೆ ಕೆಲಸ ನಿರ್ವಹಿಸಬೇಕು. ಕುಟುಂಬ ನಿರ್ವಹಣೆ ಜೊತೆಗೆ ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸಬೇಕು. ಪ್ರತಿಯೊಬ್ಬರು ವಾಟ್ಸಪ್, ಫೇಸಬುಕ್ ಮತ್ತು ಇನ್ನಿತರ ಸಾಮಾಜಿಕ ಜಾಲತಾಣಗಳನ್ನು ಬಳಸುತ್ತಿದ್ದು, ಅಧಿಕಾರಿಗಳು ಮತ್ತು ಸಿಬ್ಬಂದಿ ವಾಟ್ಸಪ್ ಮತ್ತು ಇನ್ನಿತರ ಸಾಮಾಜಿಕ ಜಾಲತಾಣಗಳನ್ನು ಬಳಸಬೇಕು. ವಾಟ್ಸಪ್ ಮತ್ತು ಇನ್ನಿತರೆ ಸಾಮಾಜಿಕ ಜಾಲತಾಣ ಬಳಸುವಾಗ ಎಚ್ಚರಿಕೆ ವಹಿಸಬೇಕು. ಸರ್ಕಾರಿ ಅಧಿಕಾರಿಗಳು, ನೌಕರರು ಕಾಲಕ್ಕೆ ತಕ್ಕಂತೆ ಕಾರ್ಯ ಶೈಲಿಯನ್ನು ಮಾರ್ಪಾಡು ಮಾಡಿಕೊಳ್ಳಬೇಕು ಎಂದು ಸಿಇಓ ಅವರು ಮಹತ್ವ

3ನೇ ಪುಟಕ್ಕೆ

### ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ರಾಮಪ್ಪ ಹೇಳಿಕೆ


## ಭೋವಿ ನಿಗಮದ ಫಲಾನುಭವಿಗಳ ಆಯ್ಕೆಗಾಗಿ ಎಲ್ಲ ಶಾಸಕರಿಗೂ ಪತ್ರ ಬರೆದು ಮನವಿ ಮಾಡಿರುವೆ

ರಾಯಚೂರು ಫೆಬ್ರವರಿ 24

ರಾಜ್ಯ ಭೋವಿ ನಿಗಮದ ವಿವಿಧ ಯೋಜನೆಗಳ ಫಲಾನುಭವಿಗಳ ಆಯ್ಕೆಯನ್ನು ಅಂತಿಮಗೊಳಿಸಿ ಕಳುಹಿಸುವಂತೆ ರಾಜ್ಯ ಎಲ್ಲ ವಿಧಾನಸಭಾ ಕ್ಷೇತ್ರಗಳ ಶಾಸಕರುಗಳಿಗೆ ತಾವು ಪತ್ರ ಬರೆದು ಮನವಿ ಮಾಡಲಾಗಿದೆ. ಫಲಾನುಭವಿಗಳ ಅಂತಿಮ ಆಯ್ಕೆಪಟ್ಟಿ ಪಡೆದು, ನಿಗಮದಲ್ಲಿ ಲಭ್ಯವಿರುವ ಅನುದಾನವನ್ನು ಕಾಲಮಿತಿಯೊಳಗೆ ಬಳಸಲು ಕ್ರಮವಹಿಸುವಂತೆ ನಿಗಮದ ಹಿರಿಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ಹೇಳಿದರು.

ಫೆ.24ರ ಮಂಗಳವಾರ ದಂದು ನಗರದ ಕೃಷಿ ವಿಶ್ವವಿದ್ಯಾಲಯದ ಅಂತಾರಾಷ್ಟ್ರೀಯ ಅತಿಥಿ ಗೃಹದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಪ್ರತಿ ವರ್ಷ ಆಯವ್ಯಯ ಹಾಗೂ ವಿವಿಧ ಯೋಜನೆಗಳಡಿ ಸರ್ಕಾರದಿಂದ ಅನುದಾನ ನಿಗದಿಪಡಿಸಲಾಗುತ್ತಿದ್ದು 2025-26ನೇ ಸಾಲಿಗೆ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ರೂ.93.75 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದೆ. ಈ ಅನುದಾನದ ಪೈಕಿ ಈಗಾಗಲೇ ಬಿಡುಗಡೆಯಾದ 68.81 ಕೋಟಿ ರೂ. ಅನುದಾನವು ಸಂಪೂರ್ಣ ಬಳಕೆಯಾಗಿದೆ ಎಂದು ಅವರು ಹೇಳಿದರು.



ರಾಜ್ಯ, ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ದಿನಾಂಕ:26-05-2015ರ ಸಭೆಯಲ್ಲಿ ನೀಡಿದ ಅನುಮೋದನೆಯಂತೆ ಹಾಗೂ ಸರ್ಕಾರದ ಆದೇಶ ದಿನಾಂಕ:29-02-2016 ರಂತೆ ಕರ್ನಾಟಕದಲ್ಲಿ ವಾಸಿಸುತ್ತಿರುವ ಭೋವಿ ಜನಾಂಗದ ಜನರ ಅಭಿವೃದ್ಧಿಯನ್ನು ಗಮನದಲ್ಲಿರಿಸಿಕೊಂಡು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮವನ್ನು ಕಂಪನಿ ಕಾಯ್ದೆ 2013 ರ ಸೆಕ್ಷನ್ 8 ರನ್ವಯ ನೋಂದಣಿ ಮಾಡಲಾಗಿದೆ. ಪರಿಶಿಷ್ಟ ಜಾತಿಯಲ್ಲಿ ಬರುವ 101

3ನೇ ಪುಟಕ್ಕೆ

### ಭೋವಿ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ, ಮುಖಂಡರೊದಿಗೆ ಸಂವಾದ

## ಭೋವಿ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು: ಎಂ ರಾಮಪ್ಪ ಸಲಹೆ

ರಾಯಚೂರು ಫೆ.24-

ಶಿಕ್ಷಣ ಪಡೆದಾಗ ಮಾತ್ರ ನಾವು ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯವಾಗಿ ಅಭಿವೃದ್ಧಿ ಹೊಂದಲು ಸಾಧ್ಯ. ಶಿಕ್ಷಣದಿಂದ ಮಾತ್ರ ಎಲ್ಲ ಸ್ಥಾನಮಾನಗಳು ಲಭ್ಯವಾಗ ಲಿದ್ದು, ಭೋವಿ ಸಮುದಾಯದ ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ಹೇಳಿದರು.

ಫೆ.24ರ ಮಂಗಳವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಭೋವಿ ನಿಗಮದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಮುದಾಯದ ಮುಖಂಡರೊದಿಗೆ ಸಮಾಲೋಚನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಿಳಿವಳಿಕೆ ಮತ್ತು ವಿಚಾರದಿಂದಲೇ ನನಗೆ ಜೀವನದಲ್ಲಿ ಎಲ್ಲ ಅವಕಾಶಗಳನ್ನು ಪಡೆಯಲು ಸಾಧ್ಯವಾಗಿದೆ. ಆ ತಿಳಿವಳಿಕೆಯು ಶಿಕ್ಷಣದಿಂದಲೇ ಬಂದಿದೆ. ಆದ್ದರಿಂದ ನಮ್ಮ ಬದಲಾವಣೆಗೆ ಶಿಕ್ಷಣವೊಂದೇ ದಾರಿಯಾಗಿದೆ. ಈ ಭಾಗದಲ್ಲಿ ಶಿಕ್ಷಣದ ಪ್ರಮಾಣದ ಕಡಿಮೆ ಇದೆ. ಸಮಾಜದ ಮುಖಂಡರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು.



ನಾನು ಬಡತನದ ಕುಟುಂಬದಿದ ಬಂದಿದ್ದೇನೆ. ಬಡವ ಕಷ್ಟಗಳಿಗೆ ಯಾವ ರೀತಿಯಲ್ಲಿ ಸ್ಪಂದಿಸಬೇಕುಬುದು ಗೊತ್ತಿದೆ. ಯಾರೇ ಆಗಲಿ ಯಾವುದೇ ವೇಳೆಯಲ್ಲಿ ಕರೆ ಮಾಡಿದರೂ ಸ್ವೀಕರಿಸಿ ಮಾತನಾಡುತ್ತೇನೆ. ಸಮಾಜದ ವಿದ್ಯಾರ್ಥಿಗಳಿಗೆ ಕಾಲೇಜು ಹಾಗೂ ವಸತಿ ಪ್ರವೇಶಕ್ಕಾಗಿ ಜನಸಾಮಾನ್ಯರು ಯಾವುದೇ ಸಮಯದಲ್ಲಿ ಸಹ ಸಂಪರ್ಕ ಮಾಡಬಹುದಾಗಿದೆ ಎಂದರು.

ಉತ್ತರ ಕರ್ನಾಟಕದ ಜಿಲ್ಲೆಗಳಿಂದ ಭೋವಿ ಅಭಿವೃದ್ಧಿ ನಿಗಮದ ಮೇಲೆ ಹೆಚ್ಚಿನ ನಿರೀಕ್ಷೆ ಇದೆ. ನಾನು ಅವರಿಗೆ ಸುಳ್ಳು ಭರವಸೆಗಳನ್ನು ನೀಡುವುದಿಲ್ಲ. ನನ್ನ ಕಡೆಯಿಂದ ಎಷ್ಟು ಸಾಧ್ಯವೋ ಅಷ್ಟು ಕೆಲಸಗಳನ್ನು ಅರ್ಹರಿಗೆ ತಲುಪಿಸಲು ಶ್ರಮಿಸುತ್ತೇನೆ ಎಂದರು.

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಭೋವಿ ಅಭಿವೃದ್ಧಿ ನಿಗಮಕ್ಕೆ ಅನೇಕ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಅವುಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದ್ದು, ಕಟ್ಟಕಡೆಯ ವ್ಯಕ್ತಿಗೂ ಕಾರ್ಯಕ್ರಮದ ಲಾಭವನ್ನು ತಲುಪಿಸಲಾಗುತ್ತದೆ ಎಂದರು.

ಅಧಿಕಾರಿಗಳಿಗೆ ಸೂಚನೆ: ಸಮಾರಂಭದಲ್ಲಿ ಪ್ರಾತ್ಯಕ್ಷಿಕೆ ಮೂಲಕ ಭೋವಿ ನಿಗಮದ ಸಮಗ್ರ ಯೋಜನೆಗಳ ಬಗ್ಗೆ ಸವಿಸ್ತರವಾಗಿ ತಿಳಿಸಲಾಯಿತು. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಚಂದ್ರು ನಾಯ್ಕ್ ಯು ಅವರು ಆಯಾ ಯೋಜನೆಗಳ ಬಗ್ಗೆ ಸಮಾರಂಭದಲ್ಲಿ ವಿವರಿಸಿದರು. ಸಭೆಯಲ್ಲಿ ಚರ್ಚೆಯಾಗುವ ಎಲ್ಲ ವಿಷಯಗಳನ್ನು ಕಡ್ಡಾಯವಾಗಿ ಸಂಬಧಿಸಿದ ಅಧಿಕಾರಿಗಳು ಗುರುತಿಸಿ, ಸಂಬಧಿಸಿದ ಫಲಾನುಭವಿಗಳೊಂದಿಗೆ ಚರ್ಚಿಸಿ ಸೌಲಭ್ಯ ದೊರಕಿಸಬೇಕು ಎಂದು ಇದೆ ವೇಳೆ ಅಧ್ಯಕ್ಷರು ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖಂಡರೊದಿಗೆ ಸಂವಾದ: ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸಮುದಾಯದ ಮುಖಂಡರೊದಿಗೆ ಅಧ್ಯಕ್ಷರು ಸಂವಾದ ನಡೆಸಿದರು. ತಾಂತ್ರಿಕ ಶಿಕ್ಷಣ ಮುಗಿಸಿದ ಸಮಾಜದ ನಿರುದ್ಯೋಗಿಗಳಿಗೆ ಆರ್ಥಿಕ ಸಹಾಯ ಮಾಡಬೇಕು. ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಬೇಕೆಂದು ಸಭೆಯಲ್ಲಿ ಮೊದಲಿಗೆ ಸಿಂಧನೂರಿನ ಮಲ್ಲೇಶ ಅವರು ಮನವಿ ಮಾಡಿದರು. ನಿಗಮದಿಂದ ವಸತಿ ನಿಯಮವನ್ನು ಪ್ರಾರಂಭಿಸಲು ಅಗತ್ಯ ಕ್ರಮಕ್ಕೆಗೊಳ್ಳಬೇಕೆಂದು ಮಲ್ಲೇಶ ರಾಯಚೂರು ಅವರು ಒತ್ತಾಯಿಸಿದರು. ನಿಗಮದಿಂದ ಭೂ ಒಡೆತನ ಯೋಜನೆಯಡಿ ಜಮೀನು ಮಂಜೂರಾಗಿದ್ದು, ಜಮೀನಿನ ಮೂಲ ಮಾಲೀಕರು ತಕಾರರು ಹಾಕಿದ್ದು, ಸಮಸ್ಯೆ ಬಗೆಹರಿಸಬೇಕು. ಭೂ ಒಡೆತನ ಯೋಜನೆಯಡಿ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಡಬೇಕೆಂದು ಹನುಮಂತ ದೇವದುರ್ಗ ಅವರು ಮನವಿ ಮಾಡಿದರು. ಭೋವಿ ಅಭಿವೃದ್ಧಿ ನಿಗಮದಿಂದ ಸಮಾಜದ ಫಲಾನುಭವಿಗಳಿಗೆ ಹೆಚ್ಚಿನ ಮಟ್ಟದಲ್ಲಿ ಸೌಲಭ್ಯಗಳನ್ನು ನೀಡಬೇಕು. ನಿಗಮದ ಕಾರ್ಯಕ್ರಮಗಳ

3ನೇ ಪುಟಕ್ಕೆ

## ಮಹಿಳಾ ಸಂಘಟನೆಗೆ ಶಕ್ತಿ ತುಂಬಿದ ಬೀದರಿನ ಐತಿಹಾಸಿಕ ಕಾರ್ಯಕ್ರಮ

# ಸಂಘಟನೆಯೇ ಬದಲಾವಣೆಯ ಶಕ್ತಿ-ಬಸವರಾಜ ಹೊರಟ್ಟಿ

ಬೀದರ, ಫೆ.24-

ಸಂಘಟನೆ ಎನ್ನುವುದು ಬಹಳ ಮುಖ್ಯ, ನೀವು ಎಲ್ಲರೂ ಮಹಿಳಾ ಸಂಘವನ್ನು ಕಟ್ಟಿಕೊಂಡು ರಾಜ್ಯವ್ಯಾಪಿ ಸಂಘಟನೆ ರೂಪಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಅವರು ಸೋಮವಾರ ಪೂಜ್ಯ ಚೆನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಘಟಕದ ಉದ್ಘಾಟನೆ, ಮತ್ತು ಪದಗ್ರಹಣ ಕಾರ್ಯಕ್ರಮ ಹಾಗೂ ಸರಕಾರಾದ ಯೋಜನೆಗಳ ಅನುಷ್ಠಾನ ಮತ್ತು ಆಡಳಿತದಲ್ಲಿ ಮಹಿಳೆಯರ ಪಾತ್ರ ಕುರಿತು ಒಂದು ದಿನದ ಕಾರ್ಯಾಗಾರ ಕುರಿತು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು

ಬೀದರ್‌ನಲ್ಲಿ ಇಷ್ಟೊಂದು ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜಿಸಿರುವುದು ನನಗೆ ಅಪಾರ ಸಂತೋಷ ತಂದಿದೆ ಎಂದ ಅವರು ಹೆಣ್ಣು ಮಕ್ಕಳು ಸಮಾಜದ ಎಲ್ಲಾ ರಂಗಗಳಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಪ್ರಶಂಸಿದರು, ಇನ್ನಷ್ಟು ಸಂಘಟಿತರಾಗಿ ಒಗ್ಗಟ್ಟು ಪ್ರದರ್ಶಿಸುವುದು ಅಗತ್ಯವೆಂದರು. ತಮ್ಮ ಹಕ್ಕುಗಳಿಗಾಗಿ ನಿರಂತರ ಹೋರಾಟ ಮಾಡುವುದು ತುಂಬಾ ಅವಶ್ಯಕ. ಹೋರಾಟದ ಮೂಲಕವೇ ಬದಲಾವಣೆ ಸಾಧ್ಯ ಎಂದು ಸಭಾಪತಿಗಳು ಅಭಿಪ್ರಾಯಪಟ್ಟರು.

ತಮ್ಮ ಜೀವನ ಅನುಭವವನ್ನು ಹಂಚಿಕೊಂಡ ಅವರು, ನಾನು ಕೂಡ ಚಿಕ್ಕ ವಯಸ್ಸಿನಿಂದಲೇ ಹೋರಾಟದ ಮೂಲಕವೇ ಈ ಹಂತಕ್ಕೆ ಬಂದವನು. ನಿಮ್ಮ ಸಂಘದ ಹೋರಾಟಗಳಲ್ಲಿ ನಾನು ಸದಾ ನಿಮ್ಮ ಜೊತೆ ಇರುತ್ತೇನೆ, ಎಂದು ಭರವಸೆ ನೀಡಿದರು.

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾತನಾಡಿ, ಮಹಿಳೆ ಮತ್ತು ಪುರುಷರು ಸಮಾಜದಲ್ಲಿ ಒಂದೇ ನಾಣ್ಯದ ಎರಡು ಮುಖಗಳಂತೆ. ಇವರಿಬ್ಬರೂ ಇದ್ದಾಗ ಮಾತ್ರ ಮಾನವ ಸಮಾಜದ ಸೃಷ್ಟಿ ಹಾಗೂ ಪ್ರಗತಿ ಸಾಧ್ಯವಾಗುತ್ತದೆ ಎಂದು ಹೇಳಿದರು.

ಇಂದಿನ ಕಾಲಘಟ್ಟದಲ್ಲಿ ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಯಲ್ಲಿ ಗುರುತಿಸಿಕೊಂಡಿದ್ದಾರೆ. ದೇಶದ ಅತ್ಯುನ್ನತ ಹುದ್ದೆಗಳಿಂದ ಹಿಡಿದು ವಿಜ್ಞಾನ, ಆಡಳಿತ, ಅಂತರಿಕ್ಷ ಕ್ಷೇತ್ರಗಳವರೆಗೂ ಮಹಿಳೆಯರು ಸಾಧನೆ ಮಾಡಿರುವುದನ್ನು ಉಲ್ಲೇಖಿಸಿದ ಅವರು, ದ್ರೌಪದಿ ಮುರ್ಮು, ಇಂದಿರಾ ಗಾಂಧಿ, ಮದರ್ ತೆರೆಸಾ, ಕಲ್ಪನಾ ಚಾವ್ಲಾ ಮುಂತಾದ ಮಹನೀಯರ ಸಾಧನೆಯನ್ನು ಸ್ಮರಿಸಿದರು. ಐಎಎಸ್, ಐಪಿಎಸ್, ವಿಜ್ಞಾನಿಗಳು ಸೇರಿದಂತೆ ವಿವಿಧ ಇಲಾಖೆಗಳಲ್ಲಿಯೂ ಮಹಿಳೆಯರು ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ನಮ್ಮ ಸರ್ಕಾರ ಮಹಿಳೆಯರಿಗಾಗಿ ಋತುಚಕ್ರ ರಜೆ ಘೋಷಣೆ ಮಾಡುವ ಮೂಲಕ ಅವರ ನೋವಿಗೆ ಸ್ಪಂದಿಸಿದೆ ಎಂದು ತಿಳಿಸಿದ ಅವರು, ಹೆಣ್ಣುಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಲಿಂಗ ತಾರತಮ್ಯಕ್ಕೆ ಕಡಿವಾಣ ಹಾಕಲು ಹಲವು ಕಾಯ್ದೆಗಳನ್ನು ಜಾರಿಗೆ ತಂದಿದೆ. ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ಸಂಘದ ಚಟುವಟಿಕೆಗಳನ್ನು ಮೆಚ್ಚಿಕೊಂಡ ಅವರು, ಸಂಘಕ್ಕೆ ಅಗತ್ಯವಿದ್ದಲ್ಲಿ ಅನುದಾನ ನೀಡಲು ಸದಾ ಸಿದ್ಧನಿದ್ದೇನೆ ಎಂದು ಸಚಿವರು ಭರವಸೆ ನೀಡಿದರು.



ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ ಅವರು ಮಾತನಾಡಿ, ಬೀದರನಲ್ಲಿ ಮಹಿಳೆಯರು ಇಷ್ಟೊಂದು ಅಚ್ಚುಕಟ್ಟಾಗಿ ಹಾಗೂ ದೊಡ್ಡ ಪ್ರಮಾಣದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿರುವುದು ತುಂಬಾ ಸಂತೋಷ ತಂದಿದೆ. ಮಹಿಳೆಯರು ದೈವದತ್ತ ಸ್ವರೂಪಿಯರು. ಅವರು ಯಾವುದೇ ಕೆಲಸ ಕೈಗೊಂಡರೂ ಪ್ರಾಮಾಣಿಕತೆಯಿಂದ ಹಾಗೂ ನಿಷ್ಠೆಯಿಂದ ನಿರ್ವಹಿಸುತ್ತಾರೆ. ಈ ಸಮಾಜದಲ್ಲಿ ಆಫೀಸ್ ಕೆಲಸ, ಮನೆ ಮಕ್ಕಳ ಜವಾಬ್ದಾರಿ ಹಾಗೂ ಇತರೆ ಎಲ್ಲಾ ಕರ್ತವ್ಯಗಳನ್ನು ಸಮರ್ಪಕವಾಗಿ ನಿಭಾಯಿಸಿ ತಮ್ಮದೇ ಆದ ಗುರುತನ್ನು ನಿರ್ಮಿಸಿಕೊಳ್ಳುವುದು ಸಾಮಾನ್ಯ ಮಾತಲ್ಲ. ಮಹಿಳೆಯರ ಶ್ರಮ, ತ್ಯಾಗ ಹಾಗೂ ಸಂಘಟಿತ ಶಕ್ತಿಯನ್ನು ಕೊಂಡಾಡಿದ ಅವರು, ಮಹಿಳಾ ಸಂಘದ ಬೆಳವಣಿಗೆಗೆ ಸರ್ಕಾರದ ಬೆಂಬಲ ಸದಾ ಇರುತ್ತದೆ ಎಂದು ಭರವಸೆ ನೀಡಿದರು. ಇದೇ ವೇಳೆ ತಮ್ಮ ಅನುದಾನದಿಂದ ಈ ಮಹಿಳಾ ಸಂಘಕ್ಕೆ ರೂ.25 ಲಕ್ಷ ರೂಪಾಯಿ ನೀಡುವುದಾಗಿ ಘೋಷಣೆ ಮಾಡಿದರು.

ಹೆಣ್ಣು ಮಕ್ಕಳು ಸಮಾಜದ ಎಲ್ಲಾ ರಂಗಗಳಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಪ್ರಶಂಸಿಸಿದ ಅವರು, ಇನ್ನಷ್ಟು ಸಂಘಟಿತರಾಗಿ ಒಗ್ಗಟ್ಟು ಪ್ರದರ್ಶಿಸುವುದು ಅಗತ್ಯವೆಂದು ತಿಳಿಸಿದರು. ತಮ್ಮ ಹಕ್ಕುಗಳಿಗಾಗಿ ನಿರಂತರ ಹೋರಾಟ ಮಾಡುವುದು ತುಂಬಾ ಅವಶ್ಯಕ. ಹೋರಾಟದ ಮೂಲಕವೇ ಬದಲಾವಣೆ ಸಾಧ್ಯ ಎಂದು ಅಭಿಪ್ರಾಯಪಟ್ಟರು. ತಮ್ಮ ಜೀವನ ಅನುಭವವನ್ನು ಹಂಚಿಕೊಂಡ ಅವರು, ನಾನು ಕೂಡ ಚಿಕ್ಕ ವಯಸ್ಸಿನಿಂದಲೇ ಹೋರಾಟದ ಮೂಲಕವೇ ಈ ಹಂತಕ್ಕೆ ಬಂದವನು. ನಿಮ್ಮ ಸಂಘದ ಹೋರಾಟಗಳಲ್ಲಿ ನಾನು ಸದಾ ನಿಮ್ಮ ಜೊತೆ ಇರುತ್ತೇನೆ, ಎಂದು ಭರವಸೆ ನೀಡಿದರು.

ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘದ ರಾಜ್ಯ ಅಧ್ಯಕ್ಷೆ ರೋಶನಿಗೌಡ ಅವರು ಪ್ರಾಸ್ತಾವಿಕ ಮಾತನಾಡಿ, ಇಂದಿನ ಸಮಾಜದಲ್ಲಿ ಹೆಣ್ಣು ಗಂಡು ಎಂದು ಮೇಲು ಕೀಳು ಎನ್ನುವ ತಾರತಮ್ಯ ನಿವಾರಣೆ ಆಗಬೇಕು ಅಂದಾಗ ಮಾತ್ರ ಸಮಾಜದಲ್ಲಿ ಮಹಿಳೆಯರು ಅಬಲೆ ಅಲ್ಲ ಅವಳು ಸಬಲೆ ಅಂತಾ ಗೊತ್ತಾಗುವುದು ಎಂದು ಸಮಾಜದಲ್ಲಿರುವ ತಾರತಮ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಮಹಿಳೆಯನ್ನು ಅಬಲೆ ಎಂದು ಕರೆಯುವ ಮನೋಭಾವನೆ ಸಂಪೂರ್ಣವಾಗಿ ದೂರವಾದಾಗ ಮಾತ್ರ ನಿಜವಾದ ಸಮಾನತೆ ಸಾಧ್ಯ. ಮಹಿಳೆ ಅಬಲೆ ಅಲ್ಲ, ಅವಳು ಸಬಲೆ. ಅವಕಾಶ ಸಿಕ್ಕಾಗ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾರೆ, ಎಂದು ಅವರು ಸ್ಪಷ್ಟವಾಗಿ ಹೇಳಿದರು.

ಸಿದ್ದಾರೆಡ್ಡಿ ಫೌಂಡೇಶನ್ ಅಧ್ಯಕ್ಷರಾದ ಗುರಮ್ಮಾ ಸಿದ್ದಾರೆಡ್ಡಿ ಮಾತನಾಡಿ, ಮಹಿಳಾ ಸಬಲೀಕರಣದ ಮಹತ್ವವನ್ನು ಒತ್ತಿ ಹೇಳಿದರು. ಮಹಿಳಾ ಸರಕಾರಿ ನೌಕರರು ಸಮಾಜದ ಅಭಿವೃದ್ಧಿಗೆ ಮಹತ್ವದ ಪಾತ್ರವಹಿಸುತ್ತಿದ್ದು, ಅವರಿಗೆ ಸ್ವಂತ ಭವನ ನಿರ್ಮಾಣವಾಗುವುದು ಸಂಘಟನೆಯ ಚಟುವಟಿಕೆಗಳಿಗೆ ಮತ್ತಷ್ಟು ಬಲ ನೀಡಲಿದೆ ಎಂದು ಹೇಳಿದರು.

ಅವರು ವೈಯಕ್ತಿಕವಾಗಿ 100ಥ100 ಅಡಿ ಜಾಗವನ್ನು ಮಹಿಳಾ ಸರಕಾರಿ ನೌಕರರ ಸಂಘದ ಭವನ ನಿರ್ಮಾಣಕ್ಕಾಗಿ ದಾನವಾಗಿ ನೀಡುವುದಾಗಿ ಘೋಷಣೆ ಮಾಡಿದರು. ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯೆಯರು ಗುರಮ್ಮಾ ಸಿದ್ದಾರೆಡ್ಡಿ ಅವರ ಉದಾರ ಮನೋಭಾವವನ್ನು ಅಭಿನಂದಿಸಿ ಕೃತಜ್ಞತೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಅಕ್ಕಪಡೆ ರಾಜ್ಯ ಸಂಯೋಜಕರಾದ ಶೈನಿ ಪ್ರದೀಪ್ ಗುಂಟಿ, ಔರಾದನ ತಾಲೂಕು ವೈದ್ಯಧಿಕಾರಿಗಳಾದ ಡಾ. ಗಾಯತ್ರಿ ವಿಜಯಕುಮಾರ ಹಾಗೂ ಜೂನಿಯರ್ ಮಿಸ್ ಇಂಡಿಯಾ ಸೆಕೆಂಡ್ ರನ್ನರ್ ಆಫ್ ಕು. ಪೂರ್ವಿ ಸಂಜಯಕುಮಾರ್ ಬಿರಾದಾರ, ಅವರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬಸವ ಕಲ್ಯಾಣದ ಪರಮ ಪೂಜ್ಯ ಶಿವಾನಂದ ಮಹಾಸ್ವಾಮಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಶಶಿಕಲಾ ಕೆ., ವೀಣಾ ಕೃಷ್ಣಮೂರ್ತಿ, ಸಿಂಧು ರಘು ಎಚ್.ಎಸ್, ಫಣಿಂದ್ರ ಪ್ರಸಾದ್, ಜಿಲ್ಲಾ ಘಟಕದ ಅಧ್ಯಕ್ಷೆ ಪಾರ್ವತಿ ವಿ. ಸೋನಾರೆ, ಜಿಲ್ಲಾ ಸಮಿತಿಯ ಪದಾಧಿಕಾರಿಗಳಾದ ಅಶ್ವಿನಿ ರುಕುಂಪುರ್, ಕೋಶಾಧ್ಯಕ್ಷರಾದ ಪದ್ಮಾ ಮಡಿವಾಳ, ವಿಜಯಶೀಲಾ ಎಸ್, ಲಕ್ಷ್ಮಿ ಬಿರಾದಾರ, ಸುನಿತಾ ಪಟ್ವಾರಿ, ಶಾರದಾ ಸಿ.ಟಿ.ಓ, ಸಂಗೀತಾ ಬಿರಾದಾರ, ಶಿವಲೀಲಾ, ಶಾರದಾ ಕಲ್ಮಕರ, ಆರತಿ ಪಾಟೀಲ್, ಡಾ, ಸುಧಾ ಜಿ, ಕಾವೇರಿ ಪುಲೇಕಾರ, ಶಕುಂತಲಾ, ಕ್ಲೇಮೆಂಟಿನಾ, ಭಾನುಪ್ರಿಯ ಅರಳಿ, ಉಮಾದೇವಿ, ಸುಜಾತ ಪೂಜಾರಿ, ಗೀತಾ ಉದ್ಗಿರ್ರೆ, ರೇಣುಕಾ ಕೋಡೆ, ನರಸಮ್ಮ ಪಾಟೀಲ್, ಜರಿನಾ ಬೇಗಂ, ಸೋನಿಕಾ, ಮುಸ್ತಾನಬೀ, ವಾಣಿ, ಶೋಭಾವತಿ ರಾಥೋಡ್, ಜಯಶ್ರೀ ವಿಲಾಸರಾವ, ಸುವರ್ಣ ಎಸ್, ಮಂಜುಳಾ ಎಸ್, ಸುರೇಖಾ ಮನ್ನೋಳಿ, ದೇವಿಕಾ ಆರ್, ರೇಣುಕ ವಾಸ್ರೆ, ಯಮುನಾ ಕಾಂಬಳೆ, ಆಮೀರಾ ಬೇಗಂ, ಸಿಂಧುಜಾ ಭಾಗವತ್, ಸುಜಾತಾ ಖೈರಾಟಕರ್, ಸುನೀತಾ ಫುಲಾರೆ, ಸರಸ್ವತಿ ಸ್ಟೆರಿದಂತೆ ಜಿಲ್ಲೆಯ ಸರಕಾರಿ ಮಹಿಳಾ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು.

## ಸರ್ಕಾರ ಮಹಿಳಾ ನೌಕರರ ಹಕ್ಕುಗಳ ರಕ್ಷಣೆಗೆ ಸದಾ ಬದ್ಧವಾಗಿದೆ-ಸಚಿವ ಈಶ್ವರ ಬಿ.ಖಂಡ್ರೆ



ಬೀದರ, ಫೆ.24-

ರಾಜ್ಯ ಸರ್ಕಾರವು ಮಹಿಳಾ ನೌಕರರ ಹಕ್ಕುಗಳ ರಕ್ಷಣೆ, ಕೆಲಸದ ಸ್ಥಳದಲ್ಲಿ ಗೌರವ ಮತ್ತು ಭದ್ರತೆ, ಸಮಾನ ಅವಕಾಶಗಳು ಒದಗಿಸಲು ಸದಾ ಬದ್ಧವಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಸೋಮವಾರ ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಬೀದರ ಜಿಲ್ಲಾ ಘಟಕದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಆಡಳಿತ ಹಾಗೂ ಸೇವಾ ಕ್ಷೇತ್ರಗಳಲ್ಲಿ ಮಹಿಳೆಯರ ಕೊಡುಗೆ ಅಪಾರವಾಗಿದ್ದು, ಅವರ ಶ್ರಮಕ್ಕೆ ತಕ್ಕ ಗೌರವ ಹಾಗೂ ಸೌಲಭ್ಯಗಳು ದೊರಕಬೇಕು ಎಂಬುದು ಸರ್ಕಾರದ ದೃಢ ನಿಲುವು. ಮಹಿಳಾ ನೌಕರರ ಸಂಘವು ಪರಸ್ಪರ ಸಹಕಾರ, ಸಮಸ್ಯೆಗಳ ಪರಿಹಾರ ಹಾಗೂ ಮಹಿಳಾ ಶಕ್ತೀಕರಣಕ್ಕೆ ಬಲವಾದ ವೇದಿಕೆಯಾಗಬೇಕು ಎಂದು ಆಶಯ ವ್ಯಕ್ತಪಡಿಸಿದ ಅವರು, ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳು ಮಹಿಳಾ ನೌಕರರಿಗೆ ಪರಿಣಾಮಕಾರಿಯಾಗಿ ತಲುಪುವಂತೆ ಸಂಘಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಧ್ಯಕ್ಷರಾದ ಬಸವರಾಜ ಹೊರಟ್ಟಿ, ಪೌರಾಡಳಿತ ಸಚಿವರಾದ ರಹಿಂ ಖಾನ್, ಸಂಘದ ಪದಾಧಿಕಾರಿಗಳು, ಮಹಿಳಾ ಸರ್ಕಾರಿ ನೌಕರರು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## 27 ರಂದು ಅಫಜಲಪುರದಲ್ಲಿ ಉದ್ಯೋಗ ಮೇಳ

ಕಲಬುರಗಿ, ಫೆ.24- ಗ್ರಾಮ ವಿಕಾಸ ಸೊಸೈಟಿ ಬೆಂಗಳೂರು ಹಾಗೂ ಮಹಾಂತೇಶ್ವರ ಐ.ಟಿ.ಐ. ಅಫಜಲಪೂರ ಇವುಗಳ ಸಂಯಕ್ತಾಶ್ರಯದಲ್ಲಿ ಇದೇ ಫೆಬ್ರವರಿ 27 ರಂದು ಮುಂಜಾನೆ 11 ಗಂಟೆಗೆ ಅಫಜಲಪೂರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿನ ಗುರು ಭವನದಲ್ಲಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಫಜಲಪುರ (ಚೌಡಾಪುರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಈ ಉದ್ಯೋಗ ಮೇಳದಲ್ಲಿ ಬೆಂಗಳೂರಿನ ದೇವನಹಳ್ಳಿ ಆಟ್ಲಿವ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಬೆಂಗಳೂರಿನ ಹಾರೋಹಳ್ಳಿಯ ಟೋಯೋಡಾ ಗೋಸಿ ಸೌತ್ ಇಂಡಿಯಾ ಪ್ರೈ. ಲಿ. ಹಾಗೂ ಬೆಂಗಳೂರಿನ ಬಿಡದಿ ಅಟ್ ಇಂಡಿಯಾ ಆಟೋ ಪಾರ್ಟ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗಳು ಭಾಗವಹಿಸಲಿವೆ. ಕಲಬುರಗಿ ಜಿಲ್ಲೆಯ 10ನೇ, 12ನೇ (18 ವರ್ಷ ಮೀರಿದ) ಬಿ.ಎ., ಬಿ.ಎಸ್ಸಿ., ಬಿ.ಕಾಂ., ಐಟಿಐ ಹಾಗೂ ಡಿಪ್ಲೋಮಾ ಪಾಸಾದ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ ದಾಖಲೆಗಳೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಉದ್ಯೋಗ ಮೇಳದಲ್ಲಿ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಿರಿಯ ತರಬೇತಿ ಅಧಿಕಾರಿ ವೀರೇಶ ಇವರ ಮೊಬೈಲ್ ಸಂಖ್ಯೆ 8088071535 ಗೆ ಸಂಪರ್ಕಿಸಲು ಕೋರಲಾಗಿದೆ.

# ರೈತರಿಗೆ ಸಮಸ್ಯೆಗಳಾಗದಂತೆ ಕೆಲಸ ನಿರ್ವಹಿಸಬೇಕು

ಕೊಪ್ಪಳ ಫೆ.24-

ಪವನ ಶಕ್ತಿ ಕೆಲಸವನ್ನು ರೈತರ ಜಮೀನುಗಳಿಗೆ ಸಮಸ್ಯೆಗಳಾಗದಂತೆ ನಿರ್ವಹಿಸುವುದರ ಜೊತೆಗೆ ಅವರ ಸಮಸ್ಯೆಗಳಿಗೆ ತಕ್ಷಣ ಸಂಬಂಧಿಸಿದ ಕಂಪನಿಯವರು ಸ್ಪಂದಿಸಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಸೋಮವಾರದಂದು ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022- 27 ಅನ್ನು ಅನುಷ್ಠಾನಗೊಳಿಸಲು ಜಿಲ್ಲೆಯಲ್ಲಿ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳು ಹಾಗೂ ವಿಂಡ್ ಎನರ್ಜಿ ಕಂಪನಿಗಳ ಮುಖ್ಯಸ್ಥರು/ ವ್ಯವಸ್ಥಾಪಕರೊಂದಿಗಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ರಸ್ತೆಗಳಲ್ಲಿ 60 ರಿಂದ 70 ಟನ್ ಭಾರೀ ವಾಹನಗಳ ಸಂಚಾರದಿಂದ ರಸ್ತೆಗಳು ಹಾಳಾಗುತ್ತಿರುವುದರ ಜೊತೆಗೆ ರೈತರ ಜಮೀನುಗಳಿಗೂ ಸಮಸ್ಯೆಗಳಾಗುತ್ತಿವೆ ಮತ್ತು ಸಂಬಂಧಿಸಿದ ಕಂಪನಿಯವರು ರೈತರ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎನ್ನುವ ದೂರುಗಳಿವೆ. ಅವುಗಳನ್ನು ಮರುಕಳಿಸದಂತೆ ನೋಡಿಕೊಳ್ಳಬೇಕು. ನಮಗೆ ವಿಂಡ್ ಎನರ್ಜಿ ಬೇಕು, ಹಾಗಂತ ತಮ್ಮ ಮನಸ್ಸಿಗೆ ಬಂದಂತೆ ಮಾಡುವುದಲ್ಲ. ಜನರಿಗೆ ಏನಾದರೂ ಸಮಸ್ಯೆಗಳಾದರು ಅವರು ಮೊದಲು ಕೇಳುವುದು ನಮಗೆ, ನಿಮಗಲ್ಲ ಎಂದು ವಿಂಡ್ ಎನರ್ಜಿ ಕಂಪನಿಯ ಮುಖ್ಯಸ್ಥರು ಹಾಗೂ ವ್ಯವಸ್ಥಾಪಕರಿಗೆ ಹೇಳಿದರು.



ತಾವು ಎಷ್ಟು ಫ್ಯಾನ್‌ಗಳನ್ನು ಹಾಕಲು ಪರ್ಮಿಶನ್ ಪಡೆದಿದ್ದೀರಾ, ಎಷ್ಟು ಹಾಕುತ್ತಿದ್ದೀರಾ ಎನ್ನುವ ಮಾಹಿತಿಯನ್ನು ನೀಡಬೇಕು. ಇದಕ್ಕಾಗಿ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಲೋಕೋಪಯೋಗಿ ಇಲಾಖೆ, ಪಿ.ಆರ್.ಇ.ಡಿ, ಪೊಲೀಸ್, ಜೆಸ್ಕಾಂ, ಅರಣ್ಯ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಒಂದು ಸಮಿತಿಯನ್ನು ರಚಿಸಿ ಅವರು ಕಂಪನಿಯವರು ಪಡೆದ ಅನುಮತಿ ಪರಿಶೀಲಿಸುವುದರ ಜೊತೆಗೆ ಸಿಎಸ್‌ಆರ್ ಅನುದಾನದಲ್ಲಿ ಹಾಳಾದ ರಸ್ತೆಗಳನ್ನು ಎಷ್ಟು ಸರಿಯಾಗಿ ಮಾಡಿದ್ದಾರೆ ಎನ್ನುವ ಕುರಿತು ಮಾಹಿತಿ ಪಡೆಯುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಸಚಿವರು, ಆದಷ್ಟು ಬೇಗನೆ ಇನ್ನೊಂದು ಸಭೆ ಕರೆಯಲಿದ್ದು, ಆ ಸಭೆಯಲ್ಲಿ ಇಲ್ಲಿಯವರೆಗೆ ಜಿಲ್ಲೆಯ ಎಲ್ಲೆಲ್ಲಿ ರೈತರ ದೂರುಗಳು ಬಂದಿವೆ ಎನ್ನುವ ಕುರಿತು ಮಾಹಿತಿ ಕೊಡಬೇಕು ಹಾಗೂ ಎಲ್ಲಾ ಕಂಪನಿಯವರು ಸಮಗ್ರ ಮಾಹಿತಿಯೊಂದಿಗೆ ತಪ್ಪದೆ ಸಭೆಗೆ ಹಾಜರಿರಬೇಕೆಂದು ಹೇಳಿದರು. ಕರ್ನಾಟಕ ವಿಧಾನಸಭೆ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ದೊಡ್ಡನಗೌಡ ಪಾಟೀಲ ಮಾತನಾಡಿ, ವಿಂಡ್ ಎನರ್ಜಿಯ ಭಾರೀ ವಾಹನಗಳ ಸಂಚಾರದಿಂದ ರಸ್ತೆಗಳು ಎಷ್ಟು ಹಾಳಾಗಿವೆ ಎಂದರೆ ತುರ್ತು ಸಂದರ್ಭದಲ್ಲಿ ಅಂಬುಲೆನ್ಸ್ ತಗೊಂಡು ಹೋಗಲಿಕ್ಕೂ ಆಗದ ಪರಿಸ್ಥಿತಿ ಬಂದಿದೆ. ವಾಹನಗಳು ಹೊಲದಲ್ಲಿ ಸಂಚರಿಸುತ್ತಿರುವುದರಿಂದ ಧೂಳಿನಿಂದ ಬೆಳೆಗಳು ಹಾಳಾಗಿವೆ. ಈ ಕುರಿತು ಮೊನ್ನೆ ನಾಗರಾಳ ಗ್ರಾಮದಲ್ಲಿ ಗಲಾಟೆ ಆಯಿತು. ರಸ್ತೆಗಳು ಹಾಳಾಗುತ್ತಿರುವುದರಿಂದ ರೈತರು ದಿನಾಲು ಗೋಳಿಡುತ್ತಾರೆ. ಫ್ಯಾನ್‌ಗಳನ್ನು ಹಾಕಲು ಎಷ್ಟು ಪರ್ಮಿಷನ್ ಪಡೆದಿದ್ದಾರೆ ಎನ್ನುವ ಮಾಹಿತಿ ನಮಗೆ ಬೇಕು. ನಾನು ಈ ಕುರಿತು ಬರುವ ಅಧಿವೇಶನದಲ್ಲಿ ಧ್ವನಿ ಎತ್ತದೆ ಬಿಡಲ್ಲ ಎಂದು ಹೇಳಿದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಮಾತನಾಡಿ, ಜಿಲ್ಲೆಯಲ್ಲಿ ವಿಂಡ್ ಎನರ್ಜಿಗೆ 5,400 ಎಕರೆ ಜಮೀನು ಹೋಗುತ್ತದೆ. ಮುಂದೆ ಇದರ ಪರಿಣಾಮ ಏನಾಗುತ್ತದೆ ಎಂಬ ಕುರಿತು ನಾವು ವಿಚಾರ ಮಾಡಬೇಕಿದೆ. ಕಂಪನಿಯವರು ತಮ್ಮ ಕಂಡೀಶನ್‌ಗಳು ಏನಿವೆ ಎನ್ನುವುದನ್ನು ತಿಳಿಸಬೇಕು. ಇತ್ತೀಚೆಗೆ ಕವಲೂರಿನಲ್ಲಿ ಇದೇ ವಿಷಯಕ್ಕೆ ಗಲಾಟೆ ನಡೆಯಿತು. ರೈತರು ಬಂದು ಜಗಳ ಮಾಡಿದರು. ಅವರ ಸಮಸ್ಯೆಗಳಿಗೆ ಯಾಕೆ ತಾವು ಸರಿಯಾಗಿ ಸ್ಪಂದಿಸುತ್ತಿಲ್ಲ. ರೈತರ ಹೊಲ ಮತ್ತು ರಸ್ತೆಗಳು ಹಾಳಾಗುತ್ತಿವೆ. ಸಿಎಸ್‌ಆರ್ ಅನುದಾನದಲ್ಲಿ ರಸ್ತೆಗಳನ್ನು ಸರಿಪಡಿಸುವ ಕೆಲಸ ಮಾಡಬೇಕೆಂದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ವಿಂಡ್ ಎನರ್ಜಿ ಕಂಪನಿಗಳ ಮುಖ್ಯಸ್ಥರು/ ವ್ಯವಸ್ಥಾಪಕರು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೀದಿಬದಿ ವ್ಯಾಪಾರಿಗಳು ಪಿ.ಎಂ. ಸ್ವ-ನಿಧಿ ಯೋಜನೆ ಯ ಸೌಲಭ್ಯ ಪಡೆಯಲು ಕರೆ : ಮುಖ್ಯಾಧಿಕಾರಿ ವೆಂಕಟೇಶ್ ತೇಲಂಗ್



ಯಾದಗಿರಿ , ಫೆ.24-

ಬೀದಿಬದಿ ವ್ಯಾಪಾರಿಗಳು ಪಿ.ಎಂ.ಸ್ವ-ನಿಧಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಕಕ್ಕೇರಾ ಪುರಸಭೆಯ ಮುಖ್ಯಾಧಿಕಾರಿ ವೆಂಕಟೇಶ್ ತೇಲಂಗ್ ಅವರು ಕರೆ ನೀಡಿದರು.

ಪುರಸಭೆ ಕಕ್ಕೇರಾ ಮತ್ತು ಭಾರತಾಂಬೆ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಆಶ್ರಯದಲ್ಲಿ ಬೀದಿಬದಿ ವ್ಯಾಪಾರಿಗಳು ನಗರದಲ್ಲಿ ಮಾರುಕಟ್ಟೆ ಮತ್ತು ರಸ್ತೆ ಬದಿಯಲ್ಲಿನ ವ್ಯಾಪಾರಸ್ಥರು ಪಿಎಂ ಸ್ವ-ನಿಧಿ ಯೋಜನೆಯಡಿ ಸಾಲ ಸೌಲಭ್ಯ ಪಡೆದಿರುವವರು ಅವರ ಕುಟುಂಬದ ಸದಸ್ಯರಿಗೆ ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್ ಧನ್ ಯೋಜನೆ ಹಾಗು ಕಟ್ಟಡ ಕಾರ್ಮಿಕರ ನೊಂದಣಿ ಮತ್ತು ಸುರಕ್ಷಾ ಭಿಮಾ ಯೋಜನೆಗಳಿಗೆ ಜೋಡಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮ ನಿರ್ವಹಣೆ ಮತ್ತು ಮೇಲುಸ್ತುವಾರಿ ವಹಿಸಿದ ಪ್ರಭಾರ ಸಮುದಾಯ ಸಂಘಟಣಾಧಿಕಾರಿಗಳಾದ ಶ್ರೀಮತಿ ತಿಪ್ಪಮ್ಮ ಬಿರಾದಾರ್ ಪ್ರಾಸ್ತಾವಿಕ ಮಾತನಾಡಿ ಸಮಗ್ರ ಯೋಜನೆಯ ಬಗ್ಗೆ ವಿವರಿಸುತ್ತಾ ಸಾಮಾಜಿಕ ಭದ್ರತೆ ಯೋಜನೆಗಳ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು.

ಕಾರ್ಯಕ್ರಮದ ಆಯೋಜಕರಾದ ಭಾರತಾಂಬೆ ಸಂಸ್ಥೆಯ ಕಾರ್ಯದರ್ಶಿಗಳಾದ ಭೀಮಶಂಕರ್ ಬೆನಕನಹಳ್ಳಿ ಮಾತನಾಡಿ, ಬೀದಿಬದಿ ವ್ಯಾಪಾರಿಗಳಿಗೆ ಸ್ವಚ್ಛತೆ ಬಗ್ಗೆ ಉಪನ್ಯಾಸ ನೀಡುತ್ತಾ ಡಿಜಿಟಲ್ ವ್ಯವಹಾರದ ಕುರಿತು ಜಾಗೃತಿ ಮೂಡಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸಿದ್ದರಾಮುರವರು ಮಾನ್ ಧನ್ ಯೋಜನೆಗಳ ಬಗ್ಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್‌ನ ವ್ಯವಸ್ಥಾಪಕ ಭೀಮರಾವ್ ಪಾಂಚಲ್ ಇನ್ಶೂರೆನ್ಸ್ ನಿಂದಾಗುವ ಪ್ರಯೋಜನೆಗಳ ಬಗ್ಗೆ ತಿಳಿಸಿದರು. ಮತ್ತು ಇತರೆ ಬ್ಯಾಂಕ್ ಅಧಿಕಾರಿಗಳು ಉಪಸ್ಥಿತರಿದ್ದರು. ಬೀದಿ ಬದಿ ವ್ಯಾಪಾರಿಗಳು ಮತ್ತು ಸಿಆರ್‌ಪಿಗಳಾದ ಮೇಘಾ ಸ್ವಾಗತಿಸಿ ಸೌಂದರ್ಯರವರು ವಂದಿಸಿ ಕೃಷ್ಣರವರು ನಿರೂಪಿಸಿದರು.

# ಆವಿಷ್ಕಾರಗಳನ್ನು ಉದ್ಯಮವಾಗಿ ರೂಪಿಸಿಕೊಳ್ಳಿ

ಕಲಬುರಗಿ, ಫೆ.24-

ಇನ್ಕ್ಯುಬೇಶನ್ ಕಾರ್ಯಾಗಾರದ ಸದುಪಯೋಗ ಪಡೆದುಕೊಂಡು ವಿದ್ಯಾರ್ಥಿಗಳು ತಮ್ಮ ಆವಿಷ್ಕಾರಗಳನ್ನು ಉದ್ಯಮವಾಗಿ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್ ಅವರು ಕರೆ ನೀಡಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ವಿಶ್ವ ಬ್ಯಾಂಕ್ ನೆರವಿನ ಕೇಂದ್ರ ಪುರಸ್ಕೃತ ಮಹತ್ವಾಕಾಂಕ್ಷಿ ರ್‍ಯಾಂಪ್ ಯೋಜನೆಯಡಿ ಸೋಮವಾರ ಅಂತಿಮ ವರ್ಷದ ತಾಂತ್ರಿಕ(ಐಟಿಐ) ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಒಂದು ದಿನದ ಇನ್ಕ್ಯುಬೇಶನ್ ಕಾರ್ಯಾಗಾರವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಇನ್ಕ್ಯುಬೇಶನ್ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಕಲಬುರಗಿ ಜಿಲ್ಲೆಯು ಇನ್ಕ್ಯುಬೇಶನ್ ಹಬ್ ಆಗಿ ಹೊರಹೊಮ್ಮಲಿದೆ ಎಂದು ಅಭಿಪ್ರಾಯಪಟ್ಟರು.



ಜಂಟಿ ನಿರ್ದೇಶಕರಾದ ಅಬ್ದುಲ್ ಅಜೀಮ್ ಅವರು ಖಂಒಕ ಯೋಜನೆ ಹಾಗೂ ಇನ್ಕ್ಯುಬೇಶನ್ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆ.ಜಿ.ಟಿ.ಟಿ.ಐ. ನಿರ್ದೇಶಕರಾದ ರಾಜೇಶ ಬಾವಗಿ ಮಾತನಾಡಿ,

ಇನ್ಕ್ಯುಬೇಶನ್ ಮೂಲಕ ತಾಂತ್ರಿಕ ವಿದ್ಯಾರ್ಥಿಗಳಿಗೆ ತಮ್ಮ ನವೋದ್ಯಮ ಆರಂಭಿಸಲು ಅಗತ್ಯ ಮಾರ್ಗದರ್ಶನ ಮತ್ತು ಮೂಲಸೌಕರ್ಯ ಲಭ್ಯವಾಗಲಿದೆ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರಾದ ರಾಘವೇಂದ್ರ ಆರ್.ಪಿ., ಕರ್ನಾಟಕ ರಾಜ್ಯ ಹಣಕಾಸು ನಿಗಮ ಶಾಖಾ ವ್ಯವಸ್ಥಾಪಕರಾದ ಡಾ. ಚಂದ್ರಕಾಂತ ಚಂದಾಪೂರ, ಸಿಡಾಕ್‌ನ ಹಿರಿಯ ತರಬೇತಿದಾರರಾದ ಸಯ್ಯದ್ ಅಶ್ಫಾಕ್ ಅಹ್ಮದ್, ಸಹಾಯಕ ನಿರ್ದೇಶಕರಾದ ಕು. ರುಪಾಲಿ ಶೇರಖಾನೆ, ಜಾಫರ್ ಖಾಸಿಮ್ ಅನ್ಸಾರಿ ಸೇರಿದಂತೆ ಇತರರು ಇದ್ದರು.

## ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಬೃಹತ್ ಪ್ರತಿಭಟನಾ ಮೆರವಣಿಗೆ

ಕಲಬುರಗಿ, ಫೆ.24-

ಮುಂಬರುವ ಬಜೆಟ್ ಅಧಿವೇಶನದಲ್ಲಿ ಬಹುಕಾಲದ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಮಾದಿಗ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ನಗರದ ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಿಂದ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿಯವರೆಗೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಲಾಯಿತು.

ಒಳಮೀಸಲಾತಿ ಕಲ್ಪಿಸಲು ಕೇವಲ ಜನಸಂಖ್ಯೆ ಮಾನದಂಡವಾಗಿರದೆ ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ, ಆರ್ಥಿಕ ಹಾಗೂ ರಾಜಕೀಯ ಹಿಂದುಳಿದಿರುವಿಕೆ ಅಸಮರ್ಪಕತೆ ಮಾನದಂಡವಾಗಿರಬೇಕು ಎಂದು ಸುಪ್ರೀಂಕೋರ್ಟ್ ಹೇಳಿದೆ. ಈಗಾಗಲೇ ಕೋರ್ಟ್ ಹೇಳಿದಂತೆ ಹರಿಯಾಣ, ಆಂಧ್ರಪ್ರದೇಶ ಹಾಗೂ ತೆಲಂಗಾಣದಲ್ಲಿ ಜಾರಿಗೊಳಿಸಲಾಗಿದೆ. ಆದರೆ ಕರ್ನಾಟಕದಲ್ಲಿ ಮಾತ್ರ ಸರಕಾರ ಕೋರ್ಟ್ ಆದೇಶ ಪಾಲಿಸದೆ ವಿಳಂಬ ನೀತಿ ಧೋರಣೆ ನಡೆಸುತ್ತಿದೆ ಎಂದು ಮುಖಂಡರು ಆರೋಪಿಸಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ 6:6:5 ಅನುಪಾತದಲ್ಲಿ ಪ್ರಾತಿನಿಧ್ಯ ನೀಡಬೇಕು. ತಾರತಮ್ಯಗಳನ್ನು ಸರಿಪಡಿಸಲು ಇದಕ್ಕೊಂದು ಶಾಶ್ವತ ಆಯೋಗ ರಚಿಸಬೇಕು, ಒಳಮೀಸಲಾತಿ ಹೋರಾಟಗಾರರ ಮೇಲೆ ದಾಖಲಿಸಿರುವ ಪ್ರಕರಣಗಳನ್ನು ಕೂಡಲೇ ಕೈಬಿಡಬೇಕು ಎಂದು ಒತ್ತಾಯಿಸಿದರು.

## ಬಳ್ಳಾರಿ ಶ್ರೀ ಕನಕ ದುರ್ಗಮ್ಮ ಸಿಡಿಬಂಡಿ ರಥೋತ್ಸವ ಮದ್ಯ ಮಾರಾಟ ನಿಷೇಧಕ್ಕೆ ಡಿಸಿ ಆದೇಶ

ಬಳ್ಳಾರಿ,ಫೆ.24-

ಬಳ್ಳಾರಿ ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನದ ಸಿಡಿಬಂಡಿ ರಥೋತ್ಸವ ಹಿನ್ನಲೆಯಲ್ಲಿ ನಗರದಲ್ಲಿ ಕಾನೂನು ಬಾಹಿರ ಚಟುವಟಿಕೆ ನಡೆಯದಂತೆ ಹಾಗೂ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21 ರನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ, ಫೆ.24 ರಂದು ಮಧ್ಯಾಹ್ನ 02 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನದ ಸುತ್ತಮುತ್ತಲಿನ 01 ಕಿ.ಮೀ ವ್ಯಾಪ್ತಿಯಲ್ಲಿ ಮದ್ಯ ಮಾರಾಟ, ಸಾಗಣಿಕೆ ಮಾಡದಂತೆ ಮತ್ತು ಮದ್ಯದಂಗಡಿ, ಬಾರ್, ರೆಸ್ಟೋರೆಂಟ್ ಗಳನ್ನು ತೆರೆಯದಂತೆ ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ.



ಈ ಆದೇಶವು ಡಿಸ್ಟಲರೀಸ್ ರಾಜ್ಯದ ವಿವಿಧ ಕೆ.ಎಸ್.ಬಿ.ಸಿ.ಎಲ್ ಡಿಪೋಗಳಿಗೆ ದಾಸ್ತಾನು ವಿಲೇವಾರಿ ಮಾಡಲು ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

## ಒಂದನೇಯ ಪುಟದಿಂದ

### ರಸಗೊಬ್ಬರಗಳ ಅತಿಯಾದ ಬಳಕೆಯನ್ನು ಹಂತಹತವಾಗಿ ಕಡಿಮೆ ಮಾಡಿ: ಪತಂಗೆ ಜಯವಂತ್ ರಾವ್ ಸಲಹೆ

ವೃದ್ದಿಸುವ ಮತ್ತು ಹೆಚ್ಚು ಫಸಲು ಬರಲು ಸಹಕಾರಿಯಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಕ ಭಾರತಿ ಕೋ-ಆಪರೇಟೀವ್ ನಿಯಮಿತ (ಕ್ರೀಬ್ಕೋ) ಅವರ ಉತ್ತನ್ನಗಳ ಬಗ್ಗೆ ರೈತರು ಮತ್ತು ವಿತರಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಕೃಷಕ ಭಾರತಿ ಕೋ-ಆಪರೇಟೀವ್ ನಿಯಮಿತದ ರಾಯಚೂರು ಜಿಲ್ಲಾ ಸ್ಥಳೀಯ ಮಾರಾಟ ವ್ಯವಸ್ಥಾಪಕರಾದ ಶಶಿಕುಮಾರ ಅವರ ನೇತೃತ್ವದಲ್ಲಿ ನಡೆದ ಭವ್ಯ ಅಧೀಕೃತ ಮಾರಾಟಗಾರ (ಡೀಲರ್ಸ್) ಸಮಾವೇಶದಲ್ಲಿ ಇಫ್ಕೋ ರಾಯಚೂರು ಜಿಲ್ಲಾ ಸ್ಥಳೀಯ ಮಾರಾಟ ವ್ಯವಸ್ಥಾಪಕರಾದ ಸಚಿನ್, ಪ್ರಧಾನ ವ್ಯವಸ್ಥಾಪಕರಾದ ಬಂದಯ್ಯ ಸ್ವಾಮಿ, ಲೇಕಪಾಲಕರಾದ ನರಸಿಂಹಪ್ಪ, ಕ್ರೀಬ್ಕೋ ಮಾನ್ಯತೆ ಪಡೆದ ರಾಯಚೂರು ಜಿಲ್ಲೆಯ ರಸಗೊಬ್ಬರ ವಿತರಕರು, ಸುತ್ತಮುತ್ತಲಿನ ಪ್ರದೇಶಗಳ ಪ್ರಗತಿಪರ ರೈತರು ಹಾಗೂ ಗಣ್ಯರು ಭಾಗವಹಿಸಿದ್ದರು. ಕಂಪನಿ ಪ್ರತಿನಿಧಿಗಳು, ವಿತರಕರು ಮತ್ತು ರೈತರ ನಡುವಿನ ಸಂವಾದಕೆ ಕ್ರೀಬ್ಕೋ ಮಹತ್ವದ ವೇದಿಕೆ ನೀಡಿತು.

### ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವಕ್ಕೆ ಚಾಲನೆ ದೈಹಿಕ, ಮಾನಸಿಕ ಸದೃಢತೆಗೆ ನೌಕರರಿಗೆ ಕ್ರೀಡೆಗಳು ಅತ್ಯಗತ್ಯ: ಸಿಇಓ ಸಲಹೆ

ಸಲಹೆ ನೀಡಿದರು.

ಈ ವೇಳೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಲಬುರಗಿ ವಿಭಾಗೀಯ ಉಪಾಧ್ಯಕ್ಷರು ಮತ್ತು ರಾಯಚೂರು ಜಿಲ್ಲಾ ಘಟಕದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ ಅವರು ಮಾತನಾಡಿ, ಸರ್ಕಾರಿ ನೌಕರರು ಒಂದು ಕುಟುಂಬದತೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ರಾಜ್ಯಾದ್ಯಂತ ನೌಕರರಿಗಾಗಿಯೇ ಕ್ರೀಡಾಕೂಟಗಳನ್ನು ಏರ್ಪಡಿಸಿ ನೌಕರರು ಪ್ರತಿ ನಿತ್ಯದ ಜಂಜಾಟಗಳಿದ ಹೊರಬರುವಂತೆ ಮಾಡಲಾಗುತ್ತಿದೆ. ಸದಾ ಒತ್ತಡದಲ್ಲಿ ಕಾರ್ಯ ನಿರ್ವಹಿಸುವ ನೌಕರರು ಇಂಥ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಉತ್ಸವಗಳಲ್ಲಿ ಭಾಗವಹಿಸಿದಾಗ ಹೊಸ ಉಲ್ಲಾಸ ಮೂಡುತ್ತದೆ ಎಂದರು.

ಇದಕ್ಕೂ ಮುಂಚೆ ಕ್ರೀಡಾಕೂಟಕ್ಕೆ ಧ್ವಜಾರೋಹಣ, ಕ್ರೀಡಾ ಜ್ಯೋತಿ ಸ್ವೀಕರಿಸುವುದರ ಮೂಲಕ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜೇರಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಾದ ವಿಜಯಶಂಕರ, ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಪವಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು, ಆಯುಷ್ ಇಲಾಖೆಯ ಡಾ.ಶಂಕರಗೌಡ, ಯುವಜನಸೇವಾ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಈರೇಶ ನಾಯಕ ಸೇರಿದಂತೆ ವಿವಿಧ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ವಿವಿಧ ಇಲಾಖೆಗಳ ಅಧಿಕಾಗಳು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ರಾಮಪ್ಪ ಹೇಳಿಕೆ ಭೋವಿ ನಿಗಮದ ಫಲಾನುಭವಿಗಳ ಆಯ್ಕೆಗಾಗಿ ಎಲ್ಲ ಶಾಸಕರಿಗೂ ಪತ್ರ ಬರೆದು ಮನವಿ ಮಾಡಿರುವೆ

ಉಪ ಜಾತಿಗಳ ಇತ್ತೀಚಿನ ಅಧಿಸೂಚನೆ ಆಧಾರದ ಮೇಲೆ ಬೋವಿ ಜಾತಿಯು ಐತಿಹಾಸಿಕ ಹಿನ್ನೆಲೆ, ಸಾಂಸ್ಕೃತಿಕ ಒಡನಾಟ, ಸಾಂಪ್ರದಾಯಿಕ ಉದ್ಯೋಗ, ಪ್ರಾದೇಶಿಕ ಭಾಷೆಗಳು, ಹಬ್ಬಗಳ ಆಚರಣೆಗಳು, ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಆಧರಿಸಿ ಪರಿಶಿಷ್ಟ ಜಾತಿಯ 09 ಜಾತಿ/ಉಪಜಾತಿಗಳಾದ ಭೋವಿ, ಒಡ್, ಒಡ್ಡ, ಒಡ್ಡರ್, ವಡ್ಡರ, ಕಲ್ಲು ಒಡ್ಡರ, ಭೋವಿ (ನಾನ್ ಬೆಸ್ಟ್) ಹಾಗೂ ಮಣ್ಣು ವಡ್ಡರ ಈ ಜಾತಿಗಳಿಗೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಯೋಜನೆಗಳ ಸೌಲಭ್ಯವನ್ನು ಪಡೆಯಲು ಗುರುತಿಸಲಾಗಿದೆ.

ಸರ್ಕಾರದ ಆದೇಶದಂತೆ ಭೋವಿ ಜನಸಂಖ್ಯೆ ಹೆಚ್ಚಿರುವ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ವಿಜಯಪುರ, ಕಲಬುರಗಿ, ತುಮಕೂರು, ಬಳ್ಳಾರಿ, ಚಿತ್ರದುರ್ಗ, ರಾಯಚೂರು, ಧಾರವಾಡ, ಕೋಲಾರ, ಶಿವಮೊಗ್ಗ ಜಿಲ್ಲೆಗಳಲ್ಲಿ ಪ್ರತ್ಯೇಕ ಭೋವಿ ನಿಗಮದ ಜಿಲ್ಲಾ ಅಭಿವೃದ್ಧಿ ಅಧಿಕಾರಿಗಳ ಕಚೇರಿಯನ್ನು ತೆರೆಯಲು ಆದೇಶಿಸಲಾಗಿರುತ್ತದೆ. ಪ್ರಸ್ತುತ ಬೆಂಗಳೂರು ನಗರ, ಕೋಲಾರ, ಶಿವಮೊಗ್ಗ, ತುಮಕೂರು, ಚಿತ್ರದುರ್ಗ, ವಿಜಯಪುರ, ರಾಯಚೂರು ಜಿಲ್ಲೆಗಳಲ್ಲಿ ಪ್ರತ್ಯೇಕ ಜಿಲ್ಲಾ ಕಚೇರಿಯನ್ನು ತೆರೆದು ನಿಗಮದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ ಎಂದು ಅವರು ತಿಳಿಸಿದರು.

ಯಾವುದೇ ಕಾರಣಕ್ಕೂ ಮಕ್ಕಳಿಗೆ ಶಿಕ್ಷಣ ಕೊಡಿಸುವದನ್ನು ತಪ್ಪಿಸುವ ಕೆಲಸ ಮಾಡಬೇಡಿ ಎಂದು ಪ್ರವಾಸ ಕೈಗೊಂಡ ಸಂದರ್ಭದಲ್ಲಿ ಭೋವಿ ಸಮಾಜದ ಮುಖಂಡರಿಗೆ ತಿಳಿಸುತ್ತಿದ್ದೇನೆ. ಶಿಕ್ಷಣದ ಮಹತ್ವವನ್ನು ಅವರಿಗೆ ಮನವರಿಕೆ ಮಾಡುತ್ತಿದ್ದೇನೆ. ಸರ್ಕಾರ ಶಿಕ್ಷಣಕ್ಕಾಗಿ ಸಾಕಷ್ಟು ಸಂಖ್ಯೆಯಲ್ಲಿ ವಸತಿ ಸೌಕರ್ಯ ಕಲ್ಪಿಸಿದೆ ಎಂದು ಸಮಾಜದ ಜನರಿಗೆ ತಿಳಿಸುತ್ತಿದ್ದೇವೆ ಎಂದು ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಮುದಾಯದ ಮುಖಂಡರಾದ ನಾರಾಯಣಸ್ವಾಮಿ, ಯಲ್ಲಪ್ಪ, ನರಸಪ್ಪ, ಶಶಿಕಲಾ ಭೀಮರಾಯ, ಯಲ್ಲಪ್ಪ, ಲಕ್ಷ್ಮಣ, ಆಂಜನೇಯ ಗಾಣಧಾಳ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರವಿ, ಸೇರಿದಂತೆ ಇತರರು ಇದ್ದರು.

### ಭೋವಿ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು: ಎಂ ರಾಮಪ್ಪ ಸಲಹೆ

ಬಗ್ಗೆ ಜಾಗೃತಿ ಮಾಡಿಸಬೇಕೆಂದು ವೆಂಕಟೇಶ ಸಿಂಧನೂರು ಅವರು ತಿಳಿಸಿದರು. ಸಾಲ ಸೌಲಭ್ಯ ವಿತರಣೆ ವೇಳೆಯಲ್ಲಿ ಬ್ಯಾಂಕ್ ಅಧಿಕಾರಿಗಳು ಜನರಿಗೆ ಸರಿಯಾದ ರೀತಿಯಲ್ಲಿ ಸ್ಪಂದಿಸುವದಿಲ್ಲ. ಕೂಡಲೇ ಬ್ಯಾಂಕುಗಳ ಅಧಿಕಾರಿಗಳ ಸಭೆ ಕರೆದು ಸೂಕ್ತ ನಿರ್ದೇಶನ ನೀಡಬೇಕು. ಅಲ್ಲದೆ ಭೋವಿ ಸಮಾಜದ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ವಿತರಣೆಗೆ ಅಗತ್ಯ ಕ್ರಮ ವಹಿಸಬೇಕೆಂದು ರಾಯಚೂರಿನ ಶಶಿಕಲಾ ಭೀಮರಾಯ ಅವರು ಅಧ್ಯಕ್ಷರ ಗಮನಕ್ಕೆ ತಂದರು.

ಹಕ್ಕು ಪತ್ರ ವಿತರಣೆ: ನಿಗಮದ ಪ್ರತಿಷ್ಠಿತ ಯೋಜನೆಯಾದ ಭೂ ಒಡೆತನ ಯೋಜನೆಯಡಿ ಸರಸ್ವತಿ ರಮೇಶ, ನಿಂಗಮ್ಮ, ಶೈಲಜಾ, ತಾಯಮ್ಮ, ಉಷಾ, ರೇಣುಕಮ್ಮ ಅವರಿಗೆ ಹಕ್ಕು ಪತ್ರಗಳನ್ನು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ವಿತರಣೆ ಮಾಡಿದರು.

ಸಭೆಗೂ ಮುನ್ನ ಸಂವಿಧಾನದ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಅದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ, ಜಲ್ದಾರ್ ಸಮಾಜದ ಮುಖಂಡರಾದ ಯಲ್ಲಪ್ಪ, ನಾರಾಯಣ ಸ್ವಾಮಿ, ಚಿತ್ರದುರ್ಗ ಭೋವಿ ಸಮಾಜದ ಜಿಲ್ಲಾಧ್ಯಕ್ಷರಾದ ತಿಪ್ಪೇಸ್ವಾಮಿ, ಶಶಿಕಲಾ ಭೀಮರಾಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾರ್ಯದರ್ಶಿಗಳಾದ ದಂಡಪ್ಪ ಬಿರಾದಾರ್ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ರಾಯಚೂರು ಫೆ. 24

ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟಿಯ ನಗರ ಆರೋಗ್ಯ ಅಭಿಯಾನದಡಿ ಮತ್ತು ಪಿ.ಎಂ ಅಭೀಮ್ ಯೋಜನೆಯಡಿಯಲ್ಲಿ 2025-26 ನೇ ಸಾಲಿಗೆ ಖಾಲಿ ಇರುವ ವಿವಿಧ ಹುದ್ದೆಗಳಿಗೆ ರಾಷ್ಟಿಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹುದ್ದೆಗಳ ವಿವರ : ಪಿ.ಎಂ. ಅಭೀಮ್ ಕಾಂಕ್ರಮದಡಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು-18 ಹುದ್ದೆಗಳು, ಎನ್.ಯು.ಹೆಚ್.ಎಂ. ಕಾರ್ಯಕ್ರಮದಡಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು-01 ಹುದ್ದೆ ಹಾಗೂ ಎನ್.ಯು.ಹೆಚ್.ಎಂ. ಕಾರ್ಯಕ್ರಮದಡಿ ಆರೋಗ್ಯ ನಿರೀಕ್ಷಣಾಧಿಕಾಧಿಕಾರಿಗಳು-01 ಹುದ್ದೆಗೆ ಗುತ್ತಿಗೆ ಆಧಾರದ ನೇಮಕಾತಿಯನ್ನು ರಾಷ್ಟಿಯ ಆರೋಗ್ಯ ಅಭಿಯಾನದ ನಿಯಮಾನುಸಾರ, ರೋಷ್ಟರ್ ಕಮ್ ಮೇರಿಟ್ ಆಧಾರದ ಮೇಲೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಮಾರ್ಚ್ 11ರೊಳಗಾಗಿ ವೆಬ್‌ಸೈಟ್: ://.. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಆನ್‌ಲೈನ್ ಹೊರತು ಪಡಿಸಿ ಇತರೆ ಯಾವುದೇ ಮೂಲಗಳಿಂದ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ. ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಯೋಜನಾ ಅಭಿವೃದ್ದಿ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಕಚೇರಿ ಅವಧಿಯಲ್ಲಿ ಮಾಹಿತಿ ಪಡೆಯಬಹುದು ಅಥವಾ ಮೊಬೈಲ್ ಸಂಖ್ಯೆ : 9449843121, 9844193931ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಸ್ಥಾಯಿ ಸಮಿತಿ ಸಭೆ | 6 ಪ್ರಕರಣಗಳಿಗೆ ಶಿಕ್ಷೆ ದಂಡ

# ಕಳ್ಳಬಟ್ಟಿ ನಿರ್ಮೂಲನೆಗೆ ಕಟ್ಟುನಿಟ್ಟಿನ ಕ್ರಮ : ಡಿಸಿ ಸಂಗಪ್ಪ




ಬಾಗಲಕೋಟೆ, ಫೆ.24-

ಕಳ್ಳಬಟ್ಟಿ ತಯಾರಿ, ಸಾಗಾಟ ಮತ್ತು ಮಾರಾಟವನ್ನು ಸಂಪೂರ್ಣವಾಗಿ ತಡೆಗಟ್ಟಲು ಪರಿಣಾಮಕಾರಿಯಾಗಿ ಜಾರಿ ಮತ್ತು ತನಿಖಾ ಕಾರ್ಯಗಳನ್ನು ನಡೆಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಕಳ್ಳಬಟ್ಟಿ ನಿರ್ಮೂಲನೆ ಕುರಿತು ರಚಿಸಲಾದ ಜಿಲ್ಲಾ ಮಟ್ಟದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಳ್ಳಬಟ್ಟಿ ನಿರ್ಮೂಲನೆಗೆ ಸಂಬಂಧಪಟ್ಟ ಇಲಾಖೆಗಳ ಜಂಟಿ ಸಹಭಾಗಿತ್ವದಲ್ಲಿ ಕಾರ್ಯಾಚರಣೆ, ಅರಿವು ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಗ್ರಾಮ ಮಟ್ಟದಲ್ಲಿ ಅನುಮಾನಾಸ್ಪದ ಕಳ್ಳಿಬಟ್ಟಿ ಚಟುವಟಿಕೆಗಳ ಬಗ್ಗೆ ತಕ್ಷಣ ಮಾಹಿತಿ ಸಂಗ್ರಹಿಸುವ ಕೆಲಸವಾಗಬೇಕೆಂದು ತಿಳಿಸಿದರು.

ಕಳ್ಳಬಟ್ಟಿ ಸೇವನೆಯಿಂದ ಜನರ ಆರೋಗ್ಯದ ಬಗ್ಗೆ ಗಂಭೀರವಾದ ಹಾನಿಯಾಗುತ್ತಿದ್ದು, ಇಂತಹ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುವ ವಿರುದ್ದ ಕಠಿಣ ಕಾನೂನು ಕ್ರಮಕ್ಕೈಗೊಳ್ಳಬೇಕು. ಸಾರ್ವಜನಿಕರೂ ಸಹ ಸಹಕರಿಸುವ ಮೂಲಕ ಮಾಹಿತಿ ನೀಡಲು ಮುಂದಾಗಬೇಕಿದೆ. ಅಕ್ರಮ ಚಟುವಟಿಕೆಗಳ ಬಗ್ಗೆ ನಿರಂತರ ಪರಿಶೀಲನೆ ನಡೆಸುವ ಕೆಲಸವಾಗಬೇಕು ಅಂದಾಗ ಮಾತ್ರ ಕಳ್ಳಬಟ್ಟಿ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಗ್ರಾಮ ಪಂಚಾಯತ ಮಟ್ಟದಲ್ಲಿ ಗ್ರಾಮ ಪಂಚಾಯತಿ ಮತ್ತು ಸ್ವಸಹಾಯ ಸಂಘಗಳ ಸಹಯೋಗದೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಕಳ್ಳಬಟ್ಟಿ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಬೇಕು. ಇದರ ಜೊತೆಗೆ ಇಂತಹ ಚಟುವಟಿಕೆಗಳನ್ನು ನಡೆಸುವವರಿಗೆ ಕಾನೂನಿನಡಿ ಇರುವ ಶಿಕ್ಷೆ ಹಾಗೂ ದಂಡದ ಬಗ್ಗೆ ತಿಳಿಸುವ ಕಾರ್ಯವಾಗಬೇಕು. ಗ್ರಾಮ ಸಭೆಗಳಲ್ಲಿ ಇದರ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಕೆಲಸ ಮಾಡಲು ತಿಳಿಸಿದರು.

ಅಬಕಾರಿ ಉಪ ಆಯುಕ್ತ ತಿಪ್ಪೆಸ್ವಾಮಿ ಡಿ.ಎನ್. ಮಾತನಾಡಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎಪ್ರಿಲ್-2025 ರಿಂದ ಜನವರಿ-2026 ವರೆಗೆ ಒಟ್ಟು 1341 ಕಳ್ಳಬಟ್ಟಿಗಳ ಮೇಲೆ ದಾಳಿ ನಡೆಸಿದ್ದು, 110 ಪ್ರಕರಣಗಳನ್ನು ದಾಖಲಿಸುವ ಮೂಲಕ 110 ಜನ ಆರೋಪಿಗಳನ್ನು ಬಂಧಿಸಲಾಗಿದೆ. 799 ಲೀಟರ್ ಕಳ್ಳಬಟ್ಟಿ ಸಾರಾಯಿ, 1086 ಕೆಜಿ ಬೆಲ್ಲದ ಕೊಳೆ ಜೊತೆಗೆ 1 ಆಟೋ, 33 ಟಿಡಬ್ಲೂ, ಒಂದು ಬೈಸಿಕಲ್ ವಶಕ್ಕೆ ಪಡೆಯಲಾಗಿದೆ. 6 ಪ್ರಕಟಣಗಳಿಗೆ 11 ಜನ ಆರೋಪಿಗಳಿಗೆ ಪ್ರತಿಯೊಬ್ಬರಿಗೂ 1 ವರ್ಷ ಕಠಿಣ ಶಿಕ್ಷೆ, 10 ಸಾವಿರ ರೂ.ಗಳ ದಂಡವನ್ನು ನ್ಯಾಯಾಲಯ ವಿಧಿಸಿದೆ. ಅಲ್ಲದೇ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಇಲ್ಲಿಯವರೆಗೆ 2.199 ಕೆಜಿ ಗಾಂಜಾ, 11 ಹಸಿ ಗಾಂಜಾ ಗಿಡಗಳು, 1 ದ್ವಿಚಕ್ರ ವಾಹನ, 1 ಮೊಬೈಲ್ ಜೊತೆಗೆ 7 ಜನ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಲಯ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಅಹಿರೆ, ಅಬಕಾರಿ ಅಧೀಕ್ಷಕ ಹನಮಪ್ಪ ಭಜಂತ್ರಿ, ಆರೋಗ್ಯ ಇಲಾಖೆಯ ಶಿವನಗೌಡ ಪಾಟೀಲ ಸೇರಿದಂತೆ ಜಿಲ್ಲೆಯ ಎಲ್ಲ ವಲಯದ ಅಬಕಾರಿ ನಿರೀಕ್ಷಕರು ಉಪಸ್ಥಿತರಿದ್ದರು.

# ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದಿಂದ ಸಾರ್ವಜನಿಕ ವಿಚಾರಣೆ: ಜೆಸ್ಕಾಂ ಆರ್ಥಿಕ ಸ್ಥಿತಿಗತಿ ಪರಿಶೀಲನೆ




ಕಲಬುರಗಿ, ಫೆ.24-

ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ (ಜೆಸ್ಕಾಂ) ಸಂಸ್ಥೆಯ 2024-25ನೇ ಆರ್ಥಿಕ ವರ್ಷದ ವಾರ್ಷಿಕ ಕಾರ್ಯ ಪರಿಶೀಲನೆ ಸಂಬಂಧವಾಗಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ (ಕೆಇಆರ್‌ಸಿ) ಸಾರ್ವಜನಿಕ ವಿಚಾರಣಾ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿತು.

ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಕೃಷ್ಣ ಬಾಜಪೇಯಿ ಅವರು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಗೌರವ ಅಧ್ಯಕ್ಷರಾದ ರವಿಕುಮಾರ್ ಅವರಿಗೆ ಸಲ್ಲಿಸಿದ ವಾರ್ಷಿಕ ಕಾರ್ಯನಿರ್ವಹಣಾ ವರಿದಿ ಪ್ರಸ್ತಾವನೆಯನ್ನು ಅನುಮೋದಿಸಿ, 131 ಕೋಟಿ ನಷ್ಟ ಉಂಟಾಗಿದ್ದು ಅದನ್ನು ಸರಿದೂಗಿಸುವಂತೆ ಮನವಿ ಮಾಡಿದರು.

ಕೆಇಆರ್‌ಸಿ ಅನುಮೋದಿತ ವೆಚ್ಚ ಮತ್ತು ಆದಾಯದ ನಡುವೆ ವ್ಯತ್ಯಾಸ ಉಂಟಾಗಿದ್ದು, ಸಂಸ್ಥೆಯ ಆದಾಯ ಮತ್ತು ಖರ್ಚು ಎರಡೂ ಹೆಚ್ಚಾಗಿದೆ. 131 ಕೋಟಿ ರೂಪಾಯಿ ಬಾಕಿ ಉಳಿದಿರುವುದರಿಂದ, ಅದನ್ನು ಸರಿದುಗಿಸುವುದು ಅಗತ್ಯವಿದೆ ಎಂದು ಅವರು ವಿವರಿಸಿದರು.

ಈ ಕುರಿತು ಕೆಇಆರ್‌ಸಿ ಅಧ್ಯಕ್ಷರು ವಿಷಯವನ್ನು ಪರಿಗಣಿಸಿ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಸಭೆಯಲ್ಲಿ ಕಂಪನಿಯ ಆದಾಯ-ವೆಚ್ಚ ವಿವರಗಳು, ವಿದ್ಯುತ್ ಖರೀದಿ ವೆಚ್ಚ, ವಿತರಣೆ ವ್ಯವಸ್ಥೆ ಸುಧಾರಣೆ, ಬಂಡವಾಳ ಹೂಡಿಕೆ ಯೋಜನೆಗಳು ಹಾಗೂ ನಷ್ಟ ಕಡಿತ ಕ್ರಮಗಳ ಕುರಿತು ಪ್ರಸ್ತುತಪಡಿಸಲಾಯಿತು.

ಇದೇ ಸಂದರ್ಭದಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಗೌರವ ಸದಸ್ಯರಾದ ಹೆಚ್.ಕೆ. ಜಗದೀಶ್, ಜೆಸ್ಕಾಂ ಅಧ್ಯಕ್ಷರಾದ ಪ್ರವೀಣ್ ಪಾಟೀಲ ಹಾರವಾಳ, ನಿರ್ದೇಶಕರು (ತಾಂತ್ರಿಕ) ಚಂದ್ರಕಾಂತ ಪಾಟೀಲ್ ಹಾಗೂ ಮುಖ್ಯ ಹಣಕಾಸು ಅಧಿಕಾರಿ ಬಿ.ಎಚ್. ಶಿವಶಂಕರ್ ಉಪಸ್ಥಿತರಿದ್ದರು.

ಗ್ರಾಹಕರ ಅಭಿಪ್ರಾಯ: ವೊಬಿ ಮಹಮ್ಮದ್ ಮಾತನಾಡಿ, ''ಕಂಪನಿಯ ಹೆಚ್ಚುವರಿ ವ್ಯತ್ಯಾಸವನ್ನು ಗ್ರಾಹಕರ ಮೇಲೆ ಹೇರುವುದು ಸಮಂಜಸವಲ್ಲ. ಇದು ಗ್ರಾಹಕರಿಗೆ ಹೊರೆಯಾಗುತ್ತದೆ,'' ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪ್ರಶ್ನೋತ್ತರ: ದೀಪಕ ಗಾಲಾ (ಸಾಮಾಜಿಕ ಕಾರ್ಯಕರ್ತರು):ರಾಯಚೂರು ನಗರದ ಮುನಿರ್‌ವಾಡಿ ಮತ್ತು ದೇವಿನಗರ ಫೀಡರ್‌ಗಳಲ್ಲಿ ಪ್ರತಿ ವರ್ಷ 15% ನಷ್ಟವಾಗುತ್ತಿದೆ. ಸೇಫ್ಟಿ ಆಫೀಸರ್ ನೇಮಕ ಮಾಡಿ, ಸಿಬ್ಬಂದಿಗೆ ಸುರಕ್ಷತಾ ತರಬೇತಿ ನೀಡಬೇಕು. ಪ್ರತಿ 3 ತಿಂಗಳಿಗೊಮ್ಮೆ ಗ್ರಾಹಕ ಸಂವಾದ ಸಭೆ ನಡೆಸಬೇಕು.

ಉತ್ತರ: ಪ್ರತಿ 3 ತಿಂಗಳಿಗೊಮ್ಮೆ ಗ್ರಾಹಕ ಸಂವಾದ ಸಭೆ ನಡೆಸುವುದಾಗಿ ಭರವಸೆ ನೀಡಿದರು. ಮುನಿರ್‌ವಾಡಿ ಮತ್ತು ದೇವಿನಗರ ಪ್ರದೇಶಗಳಿಗೆ ಭೇಟಿ ನೀಡಿ ಸಮಸ್ಯೆ ಬಗೆಹರಿಸುವುದಾಗಿ ತಿಳಿಸಿದರು.

ಮಲ್ಲಿಕಾರ್ಜುನ್ ರಾಂಪೂರ:ರಾಯಚೂರು ಜಿಲ್ಲೆಯಲ್ಲಿ ವಿದ್ಯುತ್ ದೂರುಗಳಿಗೆ ಪ್ರತಿಕ್ರಿಯೆ ಸಿಗುತ್ತಿಲ್ಲ ಎಂದು ಆರೋಪಿಸಿದರು. ಉತ್ತರ: ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಶಾಂತಗೌಡ ಜಾಗಿದಾರ: ವಿದ್ಯುತ್ ಕಳ್ಳತನಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ಕಚೇರಿಯಲ್ಲಿ ಕುಳಿತು ಸಹಿ ಮಾಡುವ ಬದಲು ಸ್ಥಳ ಪರಿಶೀಲನೆ ನಡೆಸಬೇಕು.

ಉತ್ತರ: ವಿದ್ಯುತ್ ಕಳ್ಳತನ ಪತ್ತೆ ಮಾಡಲು ಜಾಗೃತ ದಳ 24ಥ7 ಕಾರ್ಯನಿರ್ವಹಿಸುತ್ತಿದ್ದು, ಅಪರಾಧಿಗಳಿಗೆ ದಂಡ ವಿಧಿಸಲಾಗುತ್ತದೆ. ಅಧಿಕಾರಿಗಳು ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದರು.



## ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಿ- ಸಚಿವ ಶಿವರಾಜ ಎಸ್. ತಂಗಡಗಿ

ಕೊಪ್ಪಳ.ಫೆ.24-

ಈಗಾಗಲೇ ಬೇಸಿಗೆ ಆರಂಭವಾಗಿರುವುದರಿಂದ ಕೊಪ್ಪಳ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮುಂಜಾಗ್ರತೆವಹಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾ ಪಂಚಾಯತ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಅಮೃತ 2.0 ಯೋಜನಾ ಕಾಮಗಾರಿಗಳ ಪ್ರಗತಿ ಮತ್ತು ಜಲಜೀವನ ಮಿಷನ್ ಯೋಜನೆ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು.

ಜಿಲ್ಲೆಯ 7 ತಾಲ್ಲೂಕಿನಲ್ಲಿ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಲು ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು. ಜೆಇಗಳು. ಎ. ಡಬ್ಲೂಗಳು ತಮ್ಮ ವ್ಯಾಪ್ತಿಯ ಪಂಚಾಯತಿ- ಪಂಚಾಯತಿಯ ಎಲ್ಲಾ ಕಡೆ ಭೇಟಿ ನೀಡಿ ಎಲ್ಲಿ ನೀರಿನ ಸಮಸ್ಯೆಗಳಾಗಬಹುದು ಎನ್ನುವ ಕುರಿತು ಮುಂಚಿತವಾಗಿ ಮಾಹಿತಿ ಪಡೆಯಬೇಕು. ಸಮಸ್ಯೆಗಳಾದರೆ ಜನ ನಮಗೆ ಕರೆ ಮಾಡುತ್ತಾರೆ ಹಾಗಾಗಿ ಜಿಲ್ಲೆಯ ಯಾವ ಒಂದು ಊರಿನಲ್ಲಿ ನೀರಿನ ಸಮಸ್ಯೆಯಾಗಬಾರದು ಎಂದು ಹೇಳಿದರು.

ಯಾವ ತಾಲೂಕಿನಲ್ಲಿ ನೀರಿನ ಸಮಸ್ಯೆಯಾಗಬಹುದೆಂದು ಗುರುತಿಸಿ ಈಗಿನಿಂದಲೇ ಆಯಾ ತಾಲ್ಲೂಕಿನ ಶಾಸಕರ ಮುಖಾಂತರ ಸಿಇಓ ಅವರಿಗೆ ಮಾಹಿತಿ ನೀಡಿ. ಈ ಕುರಿತು ನಾನು ಬರುವ ಅಧಿವೇಶನದಲ್ಲಿ ಮಾತನಾಡುತ್ತೆನೆ. ಕುಷ್ಟಗಿ ಮತ್ತು ಯಲಬುರ್ಗಾ ತಾಲೂಕುಗಳಿಗೆ ಕೃಷ್ಣಾ ನದಿಯಿಂದ ನೀರು ಬರುತ್ತವೆ ಅಲ್ಲಿ ನೀರಿನ ಕಾಮಗಾರಿಗಳು ಸಮರ್ಪಕವಾಗಿ ಆದರೆ ನೀರಿನ ಸಮಸ್ಯೆಗಳೆ ಬರುವದಿಲ್ಲ. ನಮ್ಮ ಜಿಲ್ಲೆಯಲ್ಲಿ ಕುಡಿಯುವ ನೀರಿನ ಎಲ್ಲಾ ಕಾಮಗಾರಿಗಳು ಮುಗಿದರೆ ನೀರಿನ ಸಮಸ್ಯೆ ಇರುವುದಿಲ್ಲ. ಕುಡಿಯುವ ನೀರಿನ ಕೆಲಸ ಮತ್ತು ಕಾಮಗಾರಿಗಳನ್ನು ಅಧಿಕಾರಿಗಳು ಮುತುವರ್ಜಿವಹಿಸಿ ಫಾಲೋ ಮಾಡಬೇಕು. ಕಾಲ ಮಿತಿಯಲ್ಲಿ ಕೆಲಸ ಮಾಡದ ಗುತ್ತಿಗೆದಾರರಿಗೆ ದಂಡ ಹಾಕಬೇಕು. ಇಲ್ಲದಿದ್ದರೆ ಆ ಕೆಲಸವನ್ನು ಸರಿಯಾಗಿ ಮಾಡುವ ಮತ್ತೊಬ್ಬ ಗುತ್ತಿಗೆದಾರರಿಗೆ ಕೊಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಕರ್ನಾಟಕ ವಿಧಾನಸಭೆ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ದೊಡ್ಡನಗೌಡ ಪಾಟೀಲ. ಕೊಪ್ಪಳ ಸಂಸದರಾದ ಕೆ. ರಾಜಶೇಖರ ಹಿಟ್ನಾಳ. ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ. ಜಿಲ್ಲಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ. ಸಹಾಯಕ ಆಯುಕ್ತರಾದ ಕ್ಯಾ. ಮಹೇಶ ಮಾಲಗಿತ್ತಿ. ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಟಿ. ಕೃಷ್ಣಮೂರ್ತಿ. ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು. ಎ.ಡಬ್ಲೂ. ಹಾಗೂ ಜೆಇಗಳು ಮತ್ತು ಗುತ್ತಿಗೆದಾರರು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಹೆಸ್ಕಾಂ : 26 ರಂದು ಸಾರ್ವಜನಿಕ ವಿಚಾರಣೆ ಸಭೆ

ಬಾಗಲಕೋಟೆ, ಫೆ.24- 2024-25ನೇ ಸಾಲಿನ ಹಣಕಾಸು ವರ್ಷದ ವಾರ್ಷಿಕ ಕಾರ್ಯಕ್ಷಮತೆ ಪರಿಶೀಲನೆ (ಎಪಿಆರ್) ಅನುಮೋದನೆಗಾಗಿ ಅರ್ಜಿಯ ಕುರಿತು ಪಾಲುದಾರರು, ಸಾರ್ವಜನಿಕರ ಅಭಿಪ್ರಾಯಗಳನ್ನು ಸಂಗ್ರಹಿಸಲು ಬೆಂಗಳೂರಿನ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ಫೆಬ್ರವರಿ 26 ರಂದು ಬೆಳಿಗ್ಗೆ 10 ಗಂಟೆಗೆ ಹುಬ್ಬಳ್ಳಿಯ ವಿದ್ಯುತ್ ಭವನ, ಕಾರ್ಪೋರೇಟ ಕಚೇರಿ, ಹೆಸ್ಕಾಂ ಗೋವನಕೊಪ್ಪದಲ್ಲಿ ಸಾರ್ವಜನಿಕ ವಿಚಾರಣೆಯನ್ನು ನೆಡಸಲಿದೆ.



## ಕಲಬುರಗಿಯಲ್ಲಿ ಮಾರ್ಚ್ 1 ರಿಂದ 8 ರವರೆಗೆ ಇಂಟರ್ ನ್ಯಾಷನಲ್ ಮಹಿಳಾ ಐ.ಟಿ.ಎಫ್ 2026 ರ ಪಂದ್ಯಾವಳಿ

ಕಲಬುರಗಿ, ಫೆ.24-

ಕಲಬುರಗಿ ನಗರದ ಚಂದ್ರಶೇಖರ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಇಂಟರ್ ನ್ಯಾಷನಲ್ ಮಹಿಳಾ ಐ.ಟಿ.ಎಫ್. 2026ರ ಪಂದ್ಯಾವಳಿಯನ್ನು ಮಾರ್ಚ್ 1 ರಿಂದ 8 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದರು.

ಈ ಕುರಿತಂತೆ ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಇದೇ ಮೊದಲ ಬಾರಿಗೆ ಇಂಟರ್ ನ್ಯಾಷನಲ್ ಮಹಿಳಾ ಐ.ಟಿ.ಎಫ್ 2026 ರ ಪಂದ್ಯಾವಳಿ ಹಮ್ಮಿಕೊಳ್ಳಲಾಗುತ್ತಿದ್ದು, ಆಯೋಜನೆಗೆ ಸಂಬಂಧಿಸಿದಂತೆ ಹಾಗೂ ಯಶಸ್ವಿಯಾಗಿ ಆಯೋಜಿಸಲು ಉಪ ಸಮಿತಿಗಳನ್ನು ರಚಿಸಲಾಗಿದೆ ಎಂದರು.

ಮಹಿಳಾ ಕ್ರೀಡಾಕೂಟ ಆಗಿರುವ ಕಾರಣಕ್ಕೆ ಹೆಚ್ಚಿನ ಭದ್ರತೆ ಇರಬೇಕು. ಯಾವುದೇ ಅವಘಡಗಳಾಗದಂತೆ ನೋಡಿಕೊಳ್ಳಬೇಕು. ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರಬೇಕು. ವಸತಿ ವ್ಯವಸ್ಥೆ ಚೆನ್ನಾಗಿ ಮಾಡಬೇಕು, ಅಲ್ಲಿ ಸಹ ಯಾರಿಗೂ ಯಾವುದೇ ತೊಂದರೆಯಾಗದಂತೆ ನಿಗಾವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪ್ರತಿದಿನ ಒಬ್ಬೊಬ್ಬ ಅಧಿಕಾರಿಯನ್ನು ನಿಯೋಜಿಸಿ ಸಂಪೂರ್ಣ ದಿನದ ಅವರ ಜವಬ್ದಾರಿವಹಿಸಿಕೊಳ್ಳಬೇಕು. ಕಲಬುರಗಿಯಲ್ಲಿ ಮೊದಲ ಬಾರಿಗೆ ಮಹಿಳಾ ಕ್ರೀಡಾಕೂಟ ಹಮ್ಮಿಕೊಳ್ಳಲಾಗುತ್ತಿದ್ದು, ಸ್ಥಳೀಯ ಮಹಿಳಾ ಆಟಗಾರರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಈ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ.

ಕಳೆದ ವರ್ಷದ ಲೆಕ್ಕಚಾರ ಪರಿಶೀಲಿಸಿ, ಈ ವರ್ಷ ಕಲಬುರಗಿ ನೆಕ್ಸ್ಟ ಅಡಿಯಲ್ಲಿ ಆಯೋಜಿಸಲಾಗುವುದು, ಅಗತ್ಯ ಅನುದಾನದ ಜೊತೆಗೆ ಸ್ಥಳೀಯ ದಾನಿಗಳ ಮುಖಾಂತರ ಕೊಡುಗೆಗಳನ್ನು ಪಡೆಯಬಹುದಾಗಿದೆ.

ಬ್ರಾಂಡಿಂಗ್ ಬಗ್ಗೆ ಯೋಜಿಸಿ, ಪ್ರಯೋಜಕರನ್ನು ಹುಡುಕಬೇಕು, ಎಷ್ಟು ಆಟಗಾರರು ನಮ್ಮ ದೇಶದವರು ಹಾಗೂ ಹೊರ ದೇಶದವರು ಎಂದು ಗುರುತಿಸಿ ಊಟದ ಮೆನು ಸಿದ್ದಪಡಿಸಬೇಕು.


ಆರೋಗ್ಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ನಿಗಾ ಇರಲಿ, ಆಟಗಾರರು ಅಥವಾ ಯಾರೇ ಸಾರ್ವಜನಿಕರಿಗೆ ತೊಂದರೆಯಾದಲ್ಲಿ ಸ್ಥಳದಲ್ಲಿ ವೈದ್ಯಕೀಯ ತಂಡಗಳೊಂದಿಗೆ ಆಂಬುಲೆನ್ಸ್ ಸಹ ಇರಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರಾದ ಅವಿನಾಶ್ ಶಿಂಧೆ, ಸಹಾಯಕ ಆಯುಕ್ತರಾದ ಸಾಹಿತ್ಯ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನಿಮ್ಮೂರು ಸುದ್ದಿ

## ಸಂಪಾದಕೀಯ

## ಬಾಳಸಂಗಾತಿಯ ಆಯ್ಕೆ ಮೂಲಭೂತ ಹಕ್ಕು-ಪಕ್ಷ ಪರಿವಾರಗಳ ಪಿತ್ರಾರ್ಜಿತ ಆಸ್ತಿಯಲ್ಲ!



ನಾರೀಶಕ್ತಿ ಕುರಿತು ನಿಜವಾದ ಕಳಕಳಿ ಇದ್ದರೆ ಗುಜರಾತಿನ ಈ ಕಾಯಿದೆ ತಿದ್ದುಪಡಿ ಮಾತ್ರವಲ್ಲದೆ ದೇಶದಲ್ಲಿ ದಿನನಿತ್ಯ ಮಣ್ಣುಪಾಲಾಗುತ್ತಿರುವ ಮಹಿಳೆಯ ಘನತೆಯನ್ನು ಯಾವ ಕಾರಣಗಳಿಗಾಗಿ ಎತ್ತಿ ಹಿಡಿಯದೆ ತೆಪ್ಪಗಿದ್ದಾರೆ ಮೋದಿ? ತಿಳಿದೂ ತಿಳಿದೂ ತೆಪ್ಪಗಿದ್ದರೆ, ಒಂದೋ ಅವರು ಅಸಹಾಯಕರಿರಬೇಕು ಇಲ್ಲವೇ ಡಾಂಭಿಕರಿರಬೇಕು. ಟ್ರಂಪ್ ಅವರ ಅಮೆರಿಕಾ ಮತ್ತು ಕಮ್ಯೂನಿಸ್ಟ್ ಚೀನಾ ವಿರುದ್ಧ ತಾವು ನಿಸ್ಸಹಾಯಕರೆಂದು ಅವರು ಹೆಜ್ಜೆಹೆಜ್ಜೆಗೆ ತೋರಿಕೊಂಡಿದ್ದಾರೆ. ಆದರೆ ಡಾಂಭಿಕರೆಂದು ಹೇಗೆ ತಾನೇ ಒಪ್ಪಿಕೊಂಡಾರು ಪಾಪ!

ವಯಸ್ಕರಿಬ್ಬರು ಪರಸ್ಪರರನ್ನು ಒಪ್ಪಿ ವರಿಸುವುದು ಅವರ ಖಾಸಗಿ ಅಥವಾ ವೈಯಕ್ತಿಕ ವಿಚಾರ. ಮಧ್ಯೆ ಮೂಗು ತೂರಿಸುವ ಅಧಿಕಾರ ಸರ್ಕಾರಕ್ಕೆ ಇಲ್ಲ. ಸ್ವಯಂ ಘೋಷಿತ ಧರ್ಮರಕ್ಷಕರು ಅಥವಾ ಅನೈತಿಕ ಪೊಲೀಸುಗಿರಿ ಮಾಡುವವರಿಗೂ ಇಲ್ಲ. ಇಂತಹ ಧರ್ಮರಕ್ಷಕರು ಮತ್ತು ಅನೈತಿಕ ಪೊಲೀಸರನ್ನು ತಡೆದು, ಅವರಿಗೆ ತಮ್ಮ ಜಾಗವೆಲ್ಲಿ ಎಂದು ತೋರಿಸಿ ತೆಪ್ಪಗೆ ಕೂರಿಸುವುದು ಸರ್ಕಾರದ ಕರ್ತವ್ಯ.

ಈ ಹಿನ್ನೆಲೆಯಲ್ಲಿ ಎಲ್ಲ ವಿವಾಹಗಳಿಗೆ ಪೋಷಕರ ಅನುಮತಿ ಕಡ್ಡಾಯ ಎಂಬುದಾಗಿ ಗುಜರಾತ್ ಸರ್ಕಾರ ಕಾಯಿದೆ ತರಲು ಹೊರಟಿರುವುದು ಬೇಲಿಯೇ ಎದ್ದು ಹೊಲ ಮೇದಂತೆ. ಪ್ರಜೆಗಳ ಖಾಸಗಿ ಅಥವಾ ವೈಯಕ್ತಿಕ ಬದುಕುಗಳ ಮೇಲೆ ನಡೆಸುವ ಅತಿಕ್ರಮಣವಿದು. ವ್ಯಕ್ತಿ ಸ್ವಾತಂತ್ರ್ಯದ ಮೇಲೆ ನಡೆಸಿರುವ ಹೇಯ ಹಲ್ಲೆ. ಲವ್ ಜಿಹಾದ್ ತಡೆಯುವ ನೆಪದಲ್ಲಿ, 2006ರ ಗುಜರಾತ್ ವಿವಾಹ ನೋಂದಣಿ ಕಾಯಿದೆಗೆ ತಿದ್ದುಪಡಿ ತರುವುದಾಗಿ ಸಾರಿದ್ದಾರೆ, ಆ ರಾಜ್ಯದ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್. ಹಿಂದೂ ಹೆಣ್ಣುಮಕ್ಕಳ ಘನತೆ ಮತ್ತು ಸನಾತನ ಧರ್ಮದ ಸಂರಕ್ಷಣೆಗಾಗಿ ಈ ತಿದ್ದುಪಡಿ ಅಗತ್ಯವಿದೆ ಎಂಬುದು ಅವರ ವಾದ.

ತಾನು ಮುಂದೆ ನಿಂತು ಸಂರಕ್ಷಿಸಬೇಕಾದ ಮಾನವ ಹಕ್ಕುಗಳನ್ನು ತಾನೇ ಉಲ್ಲಂಘಿಸಿದಂತೆ. ಸರ್ಕಾರಗಳು ತಮ್ಮ ಅಸ್ತಿತ್ವಕ್ಕಾಗಿ ಮಾನವ ಹಕ್ಕುಗಳನ್ನು ದಮನ ಮಾಡುತ್ತಿರುವುದು ಹೊಸ ಸಂಗತಿಯೇನೂ ಅಲ್ಲ. ಆದರೆ ದಮನವನ್ನು ಸಮರ್ಥಿಸಿ ಕಾಯಿದೆಯನ್ನೇ ತರುತ್ತಿರುವುದು ಗುಜರಾತಿನ ಬಿಜೆಪಿ ಸರ್ಕಾರದ ಹೊಸ ಪರಾಕ್ರಮ. ಸರ್ಕಾರವೇ ಅಡ್ಡಗಾಲು ಹಾಕಿ, ಪೋಷಕರ ಅನುಮತಿಯನ್ನು ಕಡ್ಡಾಯಗೊಳಿಸುವುದು ಮುಕ್ತ ಸಮಾಜದ ಪಾಲಿನ ಲಕ್ಷಣ ಅಲ್ಲ. ನಾಗರಿಕ ಹಕ್ಕುಗಳ ಉಲ್ಲಂಘನೆಯ ನಡೆ ಎನಿಸಿಕೊಳ್ಳುತ್ತದೆ. ಜಾತಿ ಆಧಾರಿತ ಭೇದಭಾವ ಮಾಡುವಂತಿಲ್ಲ, ವಿಶೇಷವಾಗಿ ಅಸ್ಪೃಶ್ಯತೆಯನ್ನು ಆಚರಿಸುವಂತಿಲ್ಲ. ಇದು ಸಂವಿಧಾನವೇ ವಿಧಿಸಿರುವ ಕಟ್ಟಳೆ.

ಹೆಣ್ಣುಮಕ್ಕಳು ತಮ್ಮ ಬದುಕಿನ ತೀರ್ಮಾನವನ್ನು ತಾವೇ ತೆಗೆದುಕೊಳ್ಳಲು ಶಕ್ತರಲ್ಲ, ಅವರು ಎಳೆಗೂಸುಗಳಿಗೆ ಸಮ, ಅವರನ್ನು ಯಾರು ಬೇಕಾದರೂ ಸಲೀಸಾಗಿ ಮೋಸಗೊಳಿಸಬಹುದು ಎಂಬ ಅಪ್ರಬುದ್ಧ ಧೋರಣೆ. ಆದರೆ ಮೇಲ್ನೋಟಕ್ಕೆ ಬಾಲಿಶವೆಂದು ಕಂಡು ಬರುವ ಈ ಮುಖವಾಡದ ಹಿಂದೆ ಅಡಗಿರುವುದು ಅಪ್ಪಟ ಕೋಮುದ್ವೇಷ. ಬಹುಸಂಖ್ಯಾತವಾದವನ್ನು ಎತ್ತಿ ಹಿಡಿದು ಭಾರತವನ್ನು ಹಿಂದೂ ಪಾಕಿಸ್ತಾನ ಮಾಡಲು ಹೊರಟಿದೆ, ಮೋಶಾ ಮತ್ತು ಅವರ ಬೆಂಬಲಕ್ಕೆ ನಿಂತಿರುವ ಆರೆಸ್ಸೆಸ್ ಪರಿವಾರ. ನರೆಯವನ ಒಂದು ಕಣ್ಣು ಕಳೆಯಲು ತನ್ನ ಎರಡೂ ಕಣ್ಣು ಕಳೆದುಕೊಳ್ಳಲು ಮುಂದಾದ ಮೂರ್ಖನ ಕತೆಯಿದು.

ತಮ್ಮ ಬದುಕಿನ ತೀರ್ಮಾನವನ್ನು ತೆಗೆದುಕೊಳ್ಳುವ ಶಕ್ತಿ ನಾರಿಯರಿಗೆ ಇಲ್ಲ ಎನ್ನುವುದೇ ನಿಜವಾದರೆ ನಾರೀಶಕ್ತಿಯು ದೇಶದ ಅಭಿವೃದ್ಧಿಯ ಅಡಿಗಲ್ಲು ಎಂಬ ಮಾತಿಗೆ ಅರ್ಥ ಉಳಿಯುತ್ತದೆಯೇ? ಹಾಗಿದ್ದರೆ ಅರ್ಥವೇ ಇಲ್ಲದ ಈ ಒಣಮಾತನ್ನು ಪ್ರಧಾನಿ ಮೋದಿಯವರು, ಮತ್ತೆ ಮತ್ತೆ ಎತ್ತರದ ದನಿಯಲ್ಲಿ ಯಾಕೆ ಆಡುತ್ತಲೇ ಇರುತ್ತಾರೆ? ಅವರಿಗೆ ಕೇವಲ ಮಾತಿನ ಚಪಲವೇ? ಅಥವಾ ತಾನು ಹೇಳುವುದೆಲ್ಲವನ್ನು ಪಾಲಿಸಬೇಕಿಲ್ಲ ಎಂಬುದಾಗಿ ಅವರ ಪಕ್ಷ ಪರಿವಾರ ಹಾಗೂ ಹಿಂಬಾಲಕರ ಜೊತೆ ಈಗಾಗಲೇ ಒಪ್ಪಂದ ಮಾಡಿಕೊಂಡಿರುವರೇ? ಮಾಡಿಕೊಂಡಿದ್ದೇ ಆದರೆ ಅದನ್ನು ಬಹಿರಂಗವಾಗಿ ಹೇಳುವಷ್ಟು ಎದೆಗಾರಿಕೆ ಅವರಿಗೆ ಇಲ್ಲವೇಕೆ? ನಾರೀಶಕ್ತಿ ಕುರಿತು ನಿಜವಾದ ಕಳಕಳಿ ಇದ್ದರೆ ಗುಜರಾತಿನ ಈ ಕಾಯಿದೆ ತಿದ್ದುಪಡಿ ಮಾತ್ರವಲ್ಲದೆ ದೇಶದಲ್ಲಿ ದಿನನಿತ್ಯ ಮಣ್ಣುಪಾಲಾಗುತ್ತಿರುವ ಮಹಿಳೆಯ ಘನತೆಯನ್ನು ಅವರು ಯಾವ ಕಾರಣಗಳಿಗಾಗಿ ಎತ್ತಿ ಹಿಡಿಯದೆ ತೆಪ್ಪಗಿದ್ದಾರೆ? ಗೊತ್ತಿದ್ದೂ ತೆಪ್ಪಗಿದ್ದರೆ ಒಂದೋ ಅವರು ಅಸಹಾಯಕರಿರಬೇಕು ಇಲ್ಲವೇ ಡಾಂಭಿಕರಿರಬೇಕು.

ಮನುಧರ್ಮ ಶಾಸ್ತ್ರ ನೂರಾರು ವರ್ಷಗಳಿಂದ ಮನುಷ್ಯ ಮನುಷ್ಯರ ನಡುವೆ, ಗಂಡು ಹೆಣ್ಣಿನ ನಡುವೆ ಅಸಮಾನತೆಯನ್ನು ಹಿಗ್ಗಿಸಿಕೊಂಡೇ ಬಂದಿದೆ. ಈ ಮನುಧರ್ಮಶಾಸ್ತ್ರವನ್ನು ನಮ್ಮ ಸಂವಿಧಾನಕ್ಕೆ ಅಳವಡಿಸಿಕೊಳ್ಳಲಿಲ್ಲವೆಂದು ಈ ಹಿಂದೆ ಪ್ರತ್ಯಕ್ಷವಾಗಿ ಪ್ರಲಾಪಿಸಿದ ಮತ್ತು ಈಗಲೂ ಪರೋಕ್ಷವಾಗಿ ಪ್ರಲಾಪಿಸುತ್ತಿರುವ ಶಕ್ತಿಗಳು ಯಾವುವು ಎಂಬುದು ಅಂಗೈ ಹುಣ್ಣಿಗೆ ಕನ್ನಡಿ ಹಿಡಿದಂತೆ. ಈ ಪ್ರಲಾಪವೇ ಸಂವಿಧಾನವನ್ನು ಬದಲಿಸುವ ವಿಷ ಕಕ್ಕುವ ವೀರಾವೇಶದ ಮಾತುಗಳಾಗಿ ಕಾಲ ಕಾಲಕ್ಕೆ ಪಕ್ಷ ಪರಿವಾರದ ಬಾಯಿಯಲ್ಲಿ ಹೊರಬೀಳುತ್ತಲೇ ಬಂದಿವೆ.

ಸ್ತ್ರೀಯು ಬಾಲ್ಯದಲ್ಲಿ ತಂದೆಯ ವಶದಲ್ಲಿ, ಯೌವ್ವನದಲ್ಲಿ ಗಂಡನ ವಶದಲ್ಲಿ, ಗಂಡ ಸತ್ತ ನಂತರ ಪುತ್ರರ ಅಧೀನದಲ್ಲಿ ಬಾಳಬೇಕಲ್ಲದೇ ತಾನೇ ಸ್ವತಂತ್ರವಾಗಿ ವ್ಯವಹರಿಸಬಾರದು (ಬಾಲ್ಯೇ ಪಿತುರ್ವಶೇ ತಿಷ್ಠೇತ್ಪಾಣಿಗಹಸ್ಯ ಯೌವನೇ ಪುತ್ರಾಣಾಂ ಭರ್ತರಿ ಪ್ರೇತೇ ನ ಭಜೇತ್ ಸ್ತ್ರೀ ಸ್ವತಂತ್ರತಾಂ (ಅಧ್ಯಾಯ 5:148). ಹೆಣ್ಣಿನ ಸ್ವಾತಂತ್ರ್ಯವನ್ನು ಕುರಿತು ಮನುಸ್ಮೃತಿ ವಿಧಿಸಿರುವ ಕಟ್ಟಳೆಯಿದು. ಸಾವಿರಾರು ವರ್ಷಗಳ ಹಿಂದೆ ಮೇಲು ಕೀಳಿನ ಕಟ್ಟಳೆಗಳನ್ನು ಶಿಕ್ಷಾರ್ಹ ಅಪರಾಧಗಳೆಂದು ನಿಗದಿ ಮಾಡಿದ ಮನುಸ್ಮೃತಿಯು ಹೆಣ್ಣುಮಕ್ಕಳ ಕುರಿತು ಇದಕ್ಕಿಂತಲೂ ಘೋರವಾದ ಮಾತುಗಳನ್ನು ಆಡಿದೆ.

ಆದರೆ ನಾರೀಶಕ್ತಿ ( ) ಎಂಬುದು ಬಿಜೆಪಿಯ ತುಟಿಯ ಮೇಲಿನ ಮಾತು. ಅಂತರಾಳದಲ್ಲಿ ಅಡಗಿರುವುದು ಮನುವಿನ ಮಾನವವಿರೋಧಿ ಮನೋಧರ್ಮವೇ ವಿನಾ ಇನ್ನೇನೂ ಅಲ್ಲ.

ಇತ್ತೀಚೆಗೆ ಎಂಬ ಹೆಸರಿನ ಮಲೆಯಾಳಂ ಚಲನಚಿತ್ರವೊಂದು ತೆರೆಕಂಡಿತ್ತು. ಅದು ಮನುವಿನ ಮನೋಧರ್ಮ ಸಮಕಾಲೀನ ಗಂಡಾಳಿಕೆಯಡಿ ಪದರಪದರಗಳಾಗಿ ಹುದುಗಿರುವ ಪರಿಯನ್ನು ಬಿಡಿಸಿಟ್ಟಿತ್ತು. ರಕ್ಷಣೆಯ ಹೆಸರಿನಲ್ಲಿ ಹೆಣ್ಣನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ಆಕೆಗೆ ಗೊತ್ತಿಲ್ಲದಂತೆಯೇ ಕಟ್ಟಿಹಾಕುವ ಗಂಡಾಳಿಕೆಯನ್ನು ನಗ್ನಗೊಳಿಸಿತ್ತು. ನಾರಿ, ಶಕ್ತಿ, ದುರ್ಗೆ, ಜಗನ್ಮಾತೆ ಎಂದು ಒಂದೆಡೆ ಪೂಜಿಸುವವರು ನಿಜ ಬದುಕಿನಲ್ಲಿ ಅವರನ್ನು ಹೆರುವ ಯಂತ್ರಗಳಂತೆ, ಪಿಪಾಸೆ ತೀರಿಸುವ ಭೋಗದ ಸರಕಿನಂತೆ, ಜೀತದಾಳಿನಂತೆ ನಡೆಸಿಕೊಳ್ಳುತ್ತಿದ್ದಾರೆ.

ಇದೀಗ ಕಾಳಜಿ ಕಳಕಳಿಯ ಹೆಸರಿನಲ್ಲಿ ಆಕೆಯ ತೀರ್ಮಾನದ ಸ್ವಾತಂತ್ರ್ಯವನ್ನು ಕಿತ್ತುಕೊಳ್ಳುವ ಆರಂಭಕ್ಕೆ ಕೈಯಿಟ್ಟಿದೆ ಗುಜರಾತ್ ಸರ್ಕಾರ. ಬಿಜೆಪಿ ಆಳ್ವಿಕೆಯ ಉತ್ತರಪ್ರದೇಶ ಮತ್ತು ಮಧ್ಯಪ್ರದೇಶ ಈಗಾಗಲೆ ಬಲವಂತದ ಮತಾಂತರ ನಿಗ್ರಹ ಕಾಯಿದೆಯ ವೇಷಾಂತರದಲ್ಲಿ ಹೆಣ್ಣಿನ ಆಯ್ಕೆ ಸ್ವಾತಂತ್ರ್ಯಹರಣ ಮಾಡಿವೆ. ಉತ್ತರಾಖಂಡ ಬಿಜೆಪಿ ಸರ್ಕಾರ ಸಹಜೀವನದ (ಲಿವ್ ಇನ್) ಮೇಲೆ ಆಕ್ರಮಣ ನಡೆಸಿದೆ.

ಪಕ್ಷ-ಪರಿವಾರದ ಈ ಎಲ್ಲ ಘೋಷಿತ ಅಘೋಷಿತ ಆಕ್ರಮಣಗಳ ಹಿಂದಿರುವುದು ಬ್ರಾಹ್ಮಣ, ಕ್ಷತ್ರಿಯ, ವೈಶ್ಯ, ಶೂದ್ರರೆಂಬ ವರ್ಣ ವ್ಯವಸ್ಥೆಯನ್ನೂ ಎತ್ತಿ ಹಿಡಿದು ಅದು ಬೆರಕೆಯಾಗದಂತೆ ತಡೆಹಿಡಿಯುವುದೇ ಆಗಿದೆ. ಹೆಜ್ಜೆ ಹೆಜ್ಜೆಗೆ ಮೇಲು ಕೀಳನ್ನೂ, ಅಸ್ಪೃಶ್ಯತೆಯನ್ನೂ ಮೈಗೂಡಿಸಿಕೊಂಡಿರುವ ಜಾತಿವ್ಯವಸ್ಥೆ ಹಾಗೂ ಕರ್ಮಸಿದ್ಧಾಂತವನ್ನು ಎತ್ತಿ ಹಿಡಿಯುವುದೇ ಆಗಿದೆ. ಯಥಾಸ್ಥಿತಿವಾದದ ಬಹುದೊಡ್ಡ ಹತಾರುಗಳಿವು.

ಸಂವಿಧಾನದ 21ನೆಯ ಅನುಚ್ಛೇದವು ಏನನ್ನು ಸಾರುತ್ತದೆ? ಎಲ್ಲ ಭಾರತೀಯ ನಾಗರಿಕರ ಪ್ರಾಣದ ಹಕ್ಕು ಮತ್ತು ವ್ಯಕ್ತಿಗತ ಸ್ವಾತಂತ್ರ್ಯವನ್ನು ಎತ್ತಿ ಹಿಡಿಯುತ್ತದೆ. ಸಾಂವಿಧಾನಿಕ ನ್ಯಾಯದ ಕುರಿತು ಸುಪ್ರೀಮ್ ಕೋರ್ಟು ಕಾಲಕಾಲಕ್ಕೆ ನೀಡುತ್ತ ಬಂದಿರುವ ತೀರ್ಪುಗಳು ಈ ಅಮೂಲ್ಯ ಸ್ವಾತಂತ್ರ್ಯಗಳ ಸಾಂವಿಧಾನಿಕ ಖಾತರಿಯನ್ನು ಪುನರುಚ್ಚರಿಸುತ್ತ ಬಂದಿವೆ. ಬಾಹ್ಯ ಶಕ್ತಿಗಳ ಹಸ್ತಕ್ಷೇಪವಿಲ್ಲದೆ ಬಾಳಸಂಗಾತಿಯ ಆಯ್ಕೆಯ ಸ್ವಾತಂತ್ರ್ಯವೂ ಈ ಖಾತರಿಯಲ್ಲಿ ಸೇರಿದೆ. ವಯಸ್ಕರಿಬ್ಬರ ಪರಸ್ಪರರ ಆಯ್ಕೆ ಸ್ವಾತಂತ್ರ್ಯದಲ್ಲಿ ಕುಟುಂಬವಾಗಲೀ, ಸುತ್ತಣ ಸಮುದಾಯವಾಗಲೀ ಮೂಗು ತೂರಿಸುವಂತೆಯೇ ಇಲ್ಲ ಎಂದು ಸಂಶಯಕ್ಕೆ ಎಡೆಯಿಲ್ಲದಂತೆ ಸಾರಿವೆ ಈ ತೀರ್ಪುಗಳು.

ಸಂವಿಧಾನ ನೀಡಿರುವ ವ್ಯಕ್ತಿಸ್ವಾತಂತ್ರ್ಯವು ಸಂವಿಧಾನದ ಮೂಲಭೂತ ಸಂರಚನೆಯ ( ) ಅವಿಭಾಜ್ಯ ಅಂಗ. ಅರ್ಥಾತ್ ಸಂಸತ್ತಿನ ಬಹುಮತವೂ ಈ ಮೂಲಭೂತ ರಚನೆಯನ್ನು ಅಲುಗಿಸುವಂತಿಲ್ಲ.

ಗುಜರಾತ್ ಸರ್ಕಾರ ತನ್ನ ಗಂಡಾಳಿಕೆಯ, ದ್ವೇಷದ ದುಸ್ಸಾಹಸವನ್ನು ಕಸದ ಬುಟ್ಟಿಗೆಸೆಯುವುದೇ ಮಾನವಂತ ನಡೆ.

# ಭಾರತದಲ್ಲಿ ಮಾವೋವಾದ ಅಳಿಯಿತೇ; ಕಮ್ಯೂನಿಸ್ಟ್ ವಿಚಾರಧಾರೆಗೆ ಸಂಘಪರಿವಾರ ಭಯಪಡುವುದೇಕೆ?

ಆರ್‌ಎಸ್‌ಎಸ್, ಬಿಜೆಪಿ ಮೊದಲಾದ ಸಂಘಪರಿವಾರ ಮತ್ತು ಎಡಪಂಥೀಯ (ಕಮ್ಯುನಿಸ್ಟ್/ಮಾರ್ಕ್ಸ್‌ವಾದಿ) ವಿಚಾರಧಾರೆಗಳ ನಡುವಿನ ಸಂಘರ್ಷವು ನಿನ್ನೆ ಮೊನ್ನೆಯದಲ್ಲ. ಈ ಸಂಘರ್ಷಕ್ಕೆ ದಶಕಗಳ ಇತಿಹಾಸವಿದೆ. ಇವೆರಡೂ ಪರಸ್ಪರ ವಿರುದ್ಧ ಧ್ರುವಗಳಂತೆ. ಬಿಜೆಪಿಯದ್ದು ಇತರೆ ಧರ್ಮಗಳ ವಿರುದ್ಧ ಎತ್ತಿಕಟ್ಟುತ್ತಾ ರಾಜಕೀಯ. ಎಡಪಂಥೀಯರದ್ದು ವರ್ಗ ಸಂಘರ್ಷ.

''2026ರ ಮಾರ್ಚ್ 31ರ ವೇಳೆಗೆ ದೇಶವನ್ನು ನಕ್ಸಲ್ ಮುಕ್ತಗೊಳಿಸಲಾಗುವುದು'' ಇದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ. 2025ರ ಫೆಬ್ರವರಿ 9ರಂದು ಛತ್ತೀಸ್‌ಗಢದ ಬಿಜಾಪುರದಲ್ಲಿ ಭದ್ರತಾ ಪಡೆಗಳು 31 ಮಾವೋವಾದಿ ನಾಯಕರುಗಳ ಹತ್ಯೆ ಮಾಡಿತ್ತು. ಅಂದಿನಿಂದ ಅಮಿತ್ ಶಾ ವಿವಿಧ ಸಂದರ್ಭಗಳಲ್ಲಿ ದೇಶವನ್ನು ನಕ್ಸಲ್ ಮುಕ್ತಗೊಳಿಸುವುದಾಗಿ ಪುನರುಚ್ಚರಿಸುತ್ತಾ ಬಂದಿದ್ದಾರೆ. ಭಾರತವನ್ನು ಕಡು ಬಡತನ ಮುಕ್ತ ದೇಶವನ್ನಾಗಿಸುವತ್ತ ಕೇಂದ್ರ ಸರ್ಕಾರ ಗಮನಹರಿಸುವ ಗೋಜಿಗೆ ಬೀಳದೆ ಬಿಜೆಪಿಯ ಸೈದ್ಧಾಂತಿಕ ವಿರೋಧಿಗಳ ನಾಶಕ್ಕಾಗಿ ಪಣತೊಟ್ಟಿದೆ. ಮಾವೋವಾದಿಗಳ ಮನವೊಲಿಸಿ ಮುಖ್ಯವಾಹಿನಿಗೆ ತರುವ ಬದಲಾಗಿ, ಕಂಡಲ್ಲಿ ಗುಂಡಿಟ್ಟು ಕೊಂದೇ ನಾಶ ಸಾಧ್ಯ ಎಂಬ ತರ್ಕಕ್ಕೆ ಇಳಿದಿದೆ.

ಇಲ್ಲಿ ನಾವು ನಕ್ಸಲರ ಹಿಂಸಾಚಾರ ಮಾರ್ಗವನ್ನು ಒಪ್ಪಲಾಗದು. ಮಾವೋವಾದ ಸಿದ್ಧಾಂತ ಜನಪರ, ಆದರೆ ಹೋರಾಟದ ಮಾರ್ಗ ಸರಿಯಿದೆಯೇ ಎಂಬ ಪ್ರಶ್ನೆ ಇದ್ದೇ ಇರುತ್ತದೆ. ಅದಕ್ಕಾಗಿಯೇ ಹಿಂಸಾತ್ಮಕ ಮಾರ್ಗವನ್ನು ವಿರೋಧಿಸುತ್ತಿದ್ದ ಪತ್ರಕರ್ತೆ ಗೌರಿ ಲಂಕೇಶ್ ಮಾವೋವಾದಿ ನಾಯಕರು ಮುಖ್ಯವಾಹಿನಿಗೆ ಬರಬೇಕೆಂದು ಶ್ರಮಿಸಿದರು. ಆದರೆ ಮಾವೋವಾದಿಗಳನ್ನು ಹತ್ತಿಕ್ಕುವ ನೆಪದಲ್ಲಿ ಕೇಂದ್ರ ಸರ್ಕಾರ ಮಾಡುತ್ತಿರುವುದೇನು? ಹಲವು ವರದಿಗಳು ಹೇಳುವಂತೆ, ಭದ್ರತಾ ಪಡೆಗಳು ನಕ್ಸಲರೆಂದು ಭಾವಿಸಿ ಹಲವು ಸಾಮಾನ್ಯ ನಾಗರಿಕರನ್ನು ಗುಂಡಿಕ್ಕಿ ಕೊಂದಿದೆ. ಹಿಂಸೆಯನ್ನು ಒಪ್ಪಲಾಗದು ಎಂದು ಹೇಳಿ ಹಿಂಸೆಯನ್ನೇ ಮಾರ್ಗವನ್ನಾಗಿಸಿದೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರ.

2000ರಿಂದ 2025ರವರೆಗಿನ ಅವಧಿಯಲ್ಲಿ ಒಟ್ಟು 5,052 ಮಾವೋವಾದಿಗಳನ್ನು ಭದ್ರತಾ ಪಡೆಗಳು ಹತ್ಯೆ ಮಾಡಿವೆ. 7,311 ಮಾವೋವಾದಿಗಳನ್ನು ಬಂಧಿಸಲಾಗಿದೆ. ಕೇಂದ್ರದಿಂದ ಹತ್ಯೆಗೆ ಒಳಗಾಗುವುದಕ್ಕಿಂತ ಜೀವಂತವಾಗಿದ್ದು, ಅನ್ಯಾಯದ ವಿರುದ್ಧ ತಮ್ಮ ಹೋರಾಟವನ್ನು ಮುಂದುವರೆಸುವುದೇ ಉತ್ತಮವೆಂದು ನಿರ್ಧರಿಸಿ 5,571 ಮಂದಿ ಮಾವೋವಾದಿ ನಾಯಕರು ಮುಖ್ಯವಾಹಿನಿಗೆ ಬಂದಿದ್ದಾರೆ. ಈ ಮೂಲಕ ನಕ್ಸಲರನ್ನೇ ನಾವು ನಾಶ ಮಾಡಿದ್ದೇವೆ ಎಂಬುದು ಮೋದಿ ಸರ್ಕಾರದ ವಾದ.

ಭಾರತದಲ್ಲಿ ಮಾವೋವಾದ ಅಳಿಯಿತೇ?

ಆದರೆ ನೈಜವಾಗಿಯೂ ಕೇಂದ್ರದ ಈ ಹಿಂಸಾತ್ಮಕ ಮಾರ್ಗದಿಂದಾಗಿ ಭಾರತದಲ್ಲಿ ಮಾವೋವಾದ ಸಂಪೂರ್ಣವಾಗಿ ಅಳಿದಿದೆಯೇ? ಈ ಪ್ರಶ್ನೆಗೆ ಉತ್ತರ ಸರಳವಲ್ಲ. ಇನ್ನೂ ಸಶಸ್ತ್ರ ಗುಂಪುಗಳು ಅಸ್ತಿತ್ವದಲ್ಲಿದೆ. 2010ರ ವೇಳೆಗೆ ಸುಮಾರು 200ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ನಕ್ಸಲ್ ಪ್ರಭಾವವಿತ್ತು. ಆದರೆ ಇಂದು ಕೇವಲ 70-80 ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿದೆ. ಅದರಲ್ಲಿಯೂ ಕೇವಲ 25 ಜಿಲ್ಲೆಗಳಲ್ಲಿ ಮಾತ್ರ ಅತ್ಯಂತ ಪ್ರಭಾವ ಇದೆ ಎಂದು ಗುರುತಿಸಲಾಗಿದೆ. ಈ ರೀತಿಯಾಗಿ ಅಂಕಿಅಂಶಗಳ ಪ್ರಕಾರ ಪ್ರದೇಶವಾರು ಮಾವೋವಾದಿಗಳ ಪ್ರಭಾವ ಕುಗ್ಗಿದ್ದರೂ, ಸೈದ್ಧಾಂತಿಕವಾಗಿ ನಾಶವಾಗಿಲ್ಲ, ಯಾವುದೇ ಸಿದ್ಧಾಂತವನ್ನು ನಾಶಪಡಿಸಲೂ ಸಾಧ್ಯವಿಲ್ಲ. ಸಿಪಿಐ (ಮಾವೋವಾದಿ) ವಕ್ತಾರ ಮತ್ತು ಪಾಲಿಟ್‌ಬ್ಯೂರೋ ಸದಸ್ಯ, ಬರಹಗಾರ, ವಿಚಾರವಾದಿ, ಶಸ್ತ್ರಾಸ್ತ್ರ ತ್ಯಜಿಸಿ ಮುಖ್ಯವಾಹಿನಿಗೆ ಸೇರಿದ ಮಾವೋವಾದಿ ನಾಯಕ ಮಲ್ಲೋಜುಲ ವೇಣುಗೋಪಾಲ್ ರಾವ್ ಅಲಿಯಾಸ್ ಭೂಪತಿ ಹೇಳುವಂತೆ, ಮಾವೋವಾದಿಗಳು ಶಸ್ತ್ರಾಸ್ತ್ರಗಳನ್ನು ತ್ಯಜಿಸಿದ್ದಾರೆಯೇ ಹೊರತು ಸಿದ್ಧಾಂತವನ್ನಲ್ಲ.



ಅಷ್ಟಕ್ಕೂ ಮಾವೋವಾದಿಗಳ ಪ್ರಭಾವ ಕಡಿಮೆಯಾಗಲು ಅಮಿತ್ ಶಾ ಹೇಳುವಂತೆ ಮೋದಿ ಸರ್ಕಾರದ ಕ್ರಮಗಳಷ್ಟೇ ಕಾರಣವಲ್ಲ. ನಾವು ಈ ಸಂದರ್ಭದಲ್ಲಿ ಮಾವೋವಾದಿ ಹೋರಾಟ ಆರಂಭ, ನಕ್ಸಲರ ಹುಟ್ಟು, ಅಂದಿಗೂ ಇಂದಿಗೂ ಇರುವ ನಾಯಕತ್ವದ ಬಗ್ಗೆಯೂ ಗಮನಹರಿಸಿದರೆ ಸಂಪೂರ್ಣ ಚಿತ್ರಣ ಲಭಿಸಬಲ್ಲದು.

ನಕ್ಸಲ್ ಎಂಬ ಪದವು ಪಶ್ಚಿಮ ಬಂಗಾಳದ ಡಾರ್ಜಿಲಿಂಗ್ ಜಿಲ್ಲೆಯ ಒಂದು ಸಣ್ಣ ಗ್ರಾಮವಾದ ನಕ್ಸಲ್ಬರಿಯಿಂದಾಗಿ ಬಂದಿರುವುದು. ಈ ಗ್ರಾಮವು 1967ರಲ್ಲಿ ನಡೆದ ಒಂದು ಸಶಸ್ತ್ರ ರೈತ ದಂಗೆಯ ಕೇಂದ್ರಬಿಂದುವಾಗಿತ್ತು. 1960ರ ದಶಕದಲ್ಲಿ ಭಾರತದ ಗ್ರಾಮೀಣ ಭಾಗಗಳಲ್ಲಿ ಭೂಮಾಲೀಕರು ಮತ್ತು ಬಡ ಗೇಣಿದಾರರ ನಡುವೆ ತೀವ್ರ ಸಂಘರ್ಷ ಉಂಟಾಗಿತ್ತು. ಸ್ಥಳೀಯ ಬುಡಕಟ್ಟು ರೈತರು ತಮಗೆ ಸೇರಬೇಕಾದ ಭೂಮಿಯ ಹಕ್ಕಿಗಾಗಿ ಧ್ವನಿ ಎತ್ತಿ ಹೋರಾಡಿದ್ದರು. 1967ರ ಮೇ 25ರಂದು ನಕ್ಸಲ್ಬರಿ ಗ್ರಾಮದಲ್ಲಿ ಭೂಮಿಗಾಗಿ ನಡೆದ ಹೋರಾಟವು ಹಿಂಸಾತ್ಮಕ ರೂಪ ತಾಳಿತ್ತು. ಪೊಲೀಸ್ ಗುಂಡಿನ ದಾಳಿಯಲ್ಲಿ ಒಂಬತ್ತು ಮಹಿಳೆಯರು ಮತ್ತು ಇಬ್ಬರು ಮಕ್ಕಳು ಸೇರಿದಂತೆ ಹಲವರು ಸಾವನ್ನಪ್ಪಿದ್ದರು. ಇದು ದೇಶವ್ಯಾಪಿ ದೊಡ್ಡ ಆಂದೋಲನಕ್ಕೆ ಕಿಚ್ಚು ಹಚ್ಚಿತು. ನಕ್ಸಲ್ಬರಿ ಗ್ರಾಮದಲ್ಲಿ ಆರಂಭವಾದ ಕಾರಣ ನಕ್ಸಲೀಯ ಹೋರಾಟವಾಗಿ ಬದಲಾಯಿತು.

ನಕ್ಸಲ್ಬರಿ ಹೋರಾಟಗಾರರ ಸ್ಮಾರಕ

ಮಾವೋವಾದ ಅಥವಾ ಚೀನಾದ ಕಮ್ಯುನಿಸ್ಟ್ ನಾಯಕ ಮಾವೋ ತ್ಸೆ ತುಂಗ್ ಅವರ ಸಿದ್ಧಾಂತದಿಂದ ಪ್ರೇರಿತವಾದ ಈ ಚಳುವಳಿಯ ಸೈದ್ಧಾಂತಿಕ ಪಿತಾಮಹ ಎಂದು ಕರೆಯಲಾಗುವ ಚಾರು ಮಜುಂದಾರ್ ಇವರ ಎಂಟು ದಾಖಲೆಗಳು ( ) ನಕ್ಸಲೀಯ ಸಿದ್ಧಾಂತದ ಆಧಾರಸ್ತಂಭಗಳಾದವು. ಕಾನು ಸನ್ಯಾಲ್ ಎಂಬ ನಾಯಕರು ಮೈದಾನದಲ್ಲಿ ರೈತರನ್ನು ಸಂಘಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಈ ನಾಯಕರುಗಳು ಸಶಸ್ತ್ರ ಕ್ರಾಂತಿಯ ಮೂಲಕವೇ ಅಧಿಕಾರ ಹಿಡಿಯಲು ಮತ್ತು ಸಾಮಾಜಿಕ ಬದಲಾವಣೆ ತರಲು ಸಾಧ್ಯ ಎಂದು ನಂಬಿದ್ದರು. ನಿಧಾನವಾಗಿ ಈ ಹೋರಾಟ ದೇಶದಾದ್ಯಂತ ಹರಡಿತು. ಅಲ್ಲಲ್ಲಿ ಚದುರಿದ ಗುಂಪುಗಳು ಕಾಣಿಸಿಕೊಂಡಿತು. ಇದೀಗ ನಕ್ಸಲೀಯ ಎಂಬ ಪದವು ಕೇವಲ ಒಂದು ಗ್ರಾಮದ ಹೆಸರಾಗಿ ಉಳಿದಿಲ್ಲ. ಬದಲಾಗಿ ಒಂದು ನಿರ್ದಿಷ್ಟ ರಾಜಕೀಯ ಸಿದ್ಧಾಂತ, ಬಂಡಾಯ ಮತ್ತು ಸಶಸ್ತ್ರ ಹೋರಾಟದ ಸಂಕೇತವಾಗಿದೆ.

ಹೀಗೆ ಆರಂಭಗೊಂಡ ಸಶಸ್ತ್ರ ಹೋರಾಟಕ್ಕೆ ತೀವ್ರ ವಿರೋಧವೂ ವ್ಯಕ್ತವಾಗಿತ್ತು. ಹಿಂಸಾ ಮಾರ್ಗ ಬಿಟ್ಟು ಅಹಿಂಸೆಯ ಹೋರಾಟದ ಮಾರ್ಗ ಹಿಡಿಯುವುದು ಒಳಿತು ಎಂಬ ಅಭಿಪ್ರಾಯ ಇತರೆ ಎಡಪಂಥೀಯ ವಿಚಾರಧಾರೆಯ ಹೋರಾಟಗಾರರದ್ದು. ಹೀಗೆ ಹೋರಾಟದ ಹಾದಿಯಲ್ಲಿ ಹಲವು ನಾಯಕರುಗಳನ್ನು ಮಾವೋವಾದಿಗಳು ಕಳೆದುಕೊಂಡರು. ಈ ಚಳವಳಿಯ ಮೊದಲ ತಲೆಮಾರಿನ ನಾಯಕರುಗಳಾದ ಗಣಪತಿ, ಕಿಸನ್‌ಜಿ ಮೊದಲಾದವರು ವಯೋಸಹಜ ಕಾಯಿಲೆ, ಬಂಧನ ಅಥವಾ ಎನ್‌ಕೌಂಟರ್‌ನಲ್ಲಿ ಮೃತರಾಗಿದ್ದಾರೆ. ಸದ್ಯ ಹೊಸ ತಲೆಮಾರಿನ ನಾಯಕತ್ವಕ್ಕೆ ಮೊದಲಿನಷ್ಟು ಸೈದ್ಧಾಂತಿಕ ಸ್ಪಷ್ಟತೆಯಿಲ್ಲದಿರುವುದೂ ಮಾವೋವಾದಿಗಳ ಪ್ರಭಾವ ಕೊಂಚ ಕಡಿಮೆಯಾಗಲು ಕಾರಣ. ಜತೆಗೆ ಈ ಹಿಂಸೆ ಮಾರ್ಗ ಬಿಟ್ಟು ಮುಖ್ಯವಾಹಿನಿಯಲ್ಲಿ ಹೋರಾಟ ನಡೆಸುವ ಕಿಚ್ಚು ಹಲವು ನಾಯಕರುಗಳಲ್ಲಿ ಹುಟ್ಟಿಕೊಂಡಿದೆ.

ಅಷ್ಟಕ್ಕೂ ಕಮ್ಯೂನಿಸ್ಟ್ ವಿಚಾರಧಾರೆಗೆ ಸಂಘಪರಿವಾರ ಭಯಪಡುವುದೇಕೆ?

ಇವೆಲ್ಲವುದನ್ನು ನಾವು ಗ್ರಹಿಸಿದ ಬಳಿಕ ಹುಟ್ಟುವ ಪ್ರಶ್ನೆ ಕಮ್ಯೂನಿಸ್ಟ್ ವಿಚಾರಧಾರೆಗೆ ಸಂಘಪರಿವಾರ ಭಯಪಡುವುದೇಕೆ ಎಂಬುದು. ಇಲ್ಲಿ ಭಯ ಮಾತ್ರವಲ್ಲ ದ್ವೇಷವೂ ಇದೆ. ಆರ್‌ಎಸ್‌ಎಸ್, ಬಿಜೆಪಿ ಮೊದಲಾದ ಸಂಘಪರಿವಾರ ಮತ್ತು ಎಡಪಂಥೀಯ (ಕಮ್ಯುನಿಸ್ಟ್/ಮಾರ್ಕ್ಸ್‌ವಾದಿ) ವಿಚಾರಧಾರೆಗಳ ನಡುವಿನ ಸಂಘರ್ಷವು ನಿನ್ನೆ ಮೊನ್ನೆಯದಲ್ಲ. ಈ ಸಂಘರ್ಷಕ್ಕೆ ದಶಕಗಳ ಇತಿಹಾಸವಿದೆ. ಇವೆರಡೂ ಪರಸ್ಪರ ವಿರುದ್ಧ ಧ್ರುವಗಳಂತೆ. ಸಂಘಪರಿವಾರ ಧರ್ಮದ ಆಧಾರದಲ್ಲಿ ಜನರನ್ನು ಸಂಘಟಿಸಿ, ಇತರೆ ಧರ್ಮಗಳ ವಿರುದ್ಧ ಎತ್ತಿಕಟ್ಟುತ್ತಾ ರಾಜಕೀಯ ನಡೆಸಿದರೆ, ಎಡಪಂಥೀಯರದ್ದು ವರ್ಗ ಸಂಘರ್ಷ. ಸಮಾಜವು ಶೋಷಕ (ಶ್ರೀಮಂತ) ಮತ್ತು ಶೋಷಿತ (ಬಡವ) ಎಂಬ ಎರಡು ವರ್ಗಗಳ ನಡುವಿನ ಹೋರಾಟ. ಸಮಾನತೆಯೇ ಎಡಪಂಥೀಯರ ಪ್ರಾಮುಖ್ಯತೆ.

ಸಂಘ ಪರಿವಾರದ ರಾಜಕಾರಣವು ಹಿಂದೂ ಒಗ್ಗಟ್ಟು ಅಥವಾ ಕೋಮು ವಿಭಜನೆಯ ಮೇಲೆಯೇ ನಿಂತಿದೆ. ಧಾರ್ಮಿಕ ಧ್ರುವೀಕರಣದಿಂದಲೇ ಸಂಘಪರಿವಾರದ ರಾಜಕೀಯ ವಿಸ್ತರಿಸುತ್ತಿದೆ, ಅಧಿಕಾರ ಉಳಿಯುತ್ತಿದೆ. ಹೀಗಿರುವಾಗ ಕಮ್ಯೂನಿಸ್ಟ್ ಸಿದ್ಧಾಂತದೆಡೆಗೆ ಜನರು ವಾಲಿದರೆ ಹಿಂದೂ-ಮುಸ್ಲಿಂ ಎಂಬ ಕಚ್ಚಾಟವನ್ನು ಬಿಟ್ಟು ನಾವು ಕಾರ್ಮಿಕರು, ರೈತರು, ದುಡಿಯುವ ವರ್ಗ ಎಂದು ಒಂದಾಗುತ್ತಾರೆ. ಇದರಿಂದಾಗಿ ನಮ್ಮ ರಾಜಕೀಯದಾಟ ನಡೆಯದು ಎಂಬುದು ಸಂಘಪರಿವಾರದ ಆತಂಕ. ಅದಕ್ಕಾಗಿಯೇ ನಿರಂತರವಾಗಿ ಎಡ ವಿಚಾರಧಾರೆ ಹರಡದಂತೆ ಏನೆಲ್ಲ ಮಾಡಲು ಸಾಧ್ಯವೋ ಅವೆಲ್ಲ ಕಾರ್ಯವನ್ನು ಮಾಡುತ್ತಿದೆ. ಆ ಕ್ರಮಗಳಲ್ಲಿ ದೇಶದ್ರೋಹ ಆರೋಪದಲ್ಲಿ ಬಂಧನ ಮಾಡುವುದೂ ಒಂದು.

ಇನ್ನು ಕಮ್ಯುನಿಸ್ಟ್ ಸಿದ್ಧಾಂತವು ವೈಜ್ಞಾನಿಕ ಸಮಾಜವಾದದ ಮೇಲೆ ನಿಂತಿದೆ. ಇದು ಪ್ರತಿಯೊಂದನ್ನೂ ತರ್ಕ ಮತ್ತು ಪುರಾವೆಗಳ ಆಧಾರದಲ್ಲಿ ಪ್ರಶ್ನಿಸುತ್ತದೆ. ಜೆಎನ್‌ಯುನಂತಹ ವಿಶ್ವವಿದ್ಯಾಲಯಗಳಲ್ಲಿ ಎಡಪಂಥೀಯ ವಿದ್ಯಾರ್ಥಿ ಸಂಘಟನೆಗಳು ಸಂಘ ಪರಿವಾರದ ಸಾಂಸ್ಕೃತಿಕ ರಾಷ್ಟ್ರೀಯತೆಯನ್ನು ತರ್ಕಬದ್ಧವಾಗಿ ವಿರೋಧಿಸುತ್ತದೆ. ಅದರಿಂದಾಗಿಯೇ ಸಂಘ ಪರಿವಾರಕ್ಕೆ ಈ ವಿಚಾರಧಾರೆ ದೊಡ್ಡ ತಲೆನೋವಾಗಿದೆ. ಜತೆಗೆ ಬಿಜೆಪಿಗೆ ಕೋಮುದ್ವೇಷವೇ ಮತಬ್ಯಾಂಕ್. ಕೇರಳದಲ್ಲಿ ಬಿಜೆಪಿ ಮತ್ತು ಸಂಘ ಪರಿವಾರದ ಪ್ರಭಾವ ಭಾರತದ ಉಳಿದ ರಾಜ್ಯಗಳಿಗಿಂತ ಕಡಿಮೆ ಇರಲು ಅಲ್ಲಿನ ಪ್ರಬಲ ಎಡಪಂಥೀಯ ಬೇರುಗಳೇ ಕಾರಣ. ಈ ಬೇರುಗಳು ದೇಶಾದ್ಯಂತ ಹರಡಿದರೆ ಬಿಜೆಪಿಗೆ ಸಂಚಕಾರ. ಬಿಜೆಪಿಯ ಮತ ಬ್ಯಾಂಕ್ ಕೋಟೆಯನ್ನೇ ಒಡೆದುಹಾಕಿದರೆ ಬಿಜೆಪಿ ಉಳಿಯುವುದು ಹೇಗೆ?

# ತಾಲಿಬಾನ್ ಬೆಳೆಸಿದ ಪಾಕಿಸ್ತಾನಕ್ಕೀಗ ಅದೇ ನುಂಗಲಾರದ ತುತ್ತಾಗಿದ್ದೇಕೆ?

ಒಂದು ಕಾಲದಲ್ಲಿ ಅಫ್ಘಾನಿಸ್ತಾನದಲ್ಲಿ ತಾಲಿಬಾನ್ ಉಗ್ರರನ್ನು ಸಾಕಿ, ಬೆಳೆಸಿ, ಅವರಿಗೆ ಆಶ್ರಯ ನೀಡಿ ಪೋಷಿಸಿದ ಪಾಕಿಸ್ತಾನ, ಇಂದು ಅದೇ ಅಫ್ಘಾನಿಸ್ತಾನದ ಗಡಿಯೊಳಗೆ ನುಗ್ಗಿ ವಾಯುದಾಳಿ ನಡೆಸುತ್ತಿದೆ. ಭಯೋತ್ಪಾದನಾ ನೆಲೆಗಳ ಧ್ವಂಸದ ಹೆಸರಿನಲ್ಲಿ ನಡೆಯುತ್ತಿರುವ ಈ ಸಂಘರ್ಷ, ಕೇವಲ ಎರಡು ನೆರೆಹೊರೆ ದೇಶಗಳ ನಡುವಿನ ಗಡಿ ವಿವಾದವಲ್ಲ; ಬದಲಾಗಿ ಪಾಕಿಸ್ತಾನದ ದಶಕಗಳ ಹಿಂದಿನ ವಿದೇಶಾಂಗ ನೀತಿಯ ಮತ್ತು ಉಗ್ರವಾದವನ್ನು ಅಸ್ತ್ರವನ್ನಾಗಿ ಬಳಸುವ ತಂತ್ರದ ಭೀಕರ ವೈಫಲ್ಯದ ಸ್ಪಷ್ಟ ನಿದರ್ಶನವಾಗಿದೆ.

1990ರ ದಶಕದಲ್ಲಿ ಅಫ್ಘಾನಿಸ್ತಾನದಲ್ಲಿ ತನ್ನ ಹಿಡಿತ ಸಾಧಿಸಲು ಹಾಗೂ ಭಾರತದ ಪ್ರಭಾವವನ್ನು ತಡೆಯಲು ತನ್ನ ಕಾರ್ಯತಂತ್ರದ ಆಳವಾಗಿ ಪಾಕಿಸ್ತಾನದ ಸೇನೆ ಮತ್ತು ಐಎಸ್‌ಐ ತಾಲಿಬಾನ್ ಸಂಘಟನೆಗೆ ಜನ್ಮ ನೀಡಿತ್ತು. 2021ರ ಆಗಸ್ಟ್‌ನಲ್ಲಿ ಅಮೆರಿಕದ ಸೇನೆ ಕಾಬೂಲ್ ತೊರೆದು, ಅಫ್ಘಾನ್ ತಾಲಿಬಾನ್ ಮತ್ತೆ ಅಧಿಕಾರ ಹಿಡಿದಾಗ ಜಗತ್ತಿನಲ್ಲೇ ಅತಿ ಹೆಚ್ಚು ಸಂಭ್ರಮಿಸಿದ್ದು ಇದೇ ಪಾಕಿಸ್ತಾನ. ''ಅಫ್ಘಾನಿಯರು ಗುಲಾಮಗಿರಿಯ ಸರಪಳಿಯನ್ನು ಮುರಿದಿದ್ದಾರೆ'' ಎಂದು ಅಂದಿನ ಪಾಕ್ ಪ್ರಧಾನಿ ಇಮ್ರಾನ್ ಖಾನ್ ಬಣ್ಣಿಸಿದ್ದರು. ತಾಲಿಬಾನ್‌ಗಳು ತಮಗೆ ವಿಧೇಯರಾಗಿರುತ್ತಾರೆ, ಕಾಬೂಲ್‌ನಲ್ಲಿ ತನ್ನ ಕೈಗೊಂಬೆ ಸರ್ಕಾರ ಇರುತ್ತದೆ ಎಂಬುದು ಇಸ್ಲಾಮಾಬಾದ್‌ನ ಲೆಕ್ಕಾಚಾರವಾಗಿತ್ತು.

ಆದರೆ, ಪಾಕಿಸ್ತಾನದ ಲೆಕ್ಕಾಚಾರಗಳು ಈಗ ಸಂಪೂರ್ಣವಾಗಿ ತಲೆಕೆಳಗಾಗಿವೆ. ಅಫ್ಘಾನ್ ತಾಲಿಬಾನ್ ಕಾಬೂಲ್‌ನಲ್ಲಿ ಅಧಿಕಾರಕ್ಕೆ ಬರುತ್ತಿದ್ದಂತೆ, ಪಾಕಿಸ್ತಾನದೊಳಗೆ ಸಕ್ರಿಯವಾಗಿರುವ ತೆಹ್ರೀಕ್-ಇ-ತಾಲಿಬಾನ್ ಪಾಕಿಸ್ತಾನ್ ಉಗ್ರ ಸಂಘಟನೆಗೆ ಆನೆಬಲ ಬಂದಂತಾಗಿದೆ. ಟಿಟಿಪಿಯು ಅಫ್ಘಾನ್ ತಾಲಿಬಾನ್‌ನ ಸೈದ್ಧಾಂತಿಕ ಅವಳಿಯಾಗಿದೆ. ಪಾಕಿಸ್ತಾನಿ ಸೇನೆ ಮತ್ತು ಸರ್ಕಾರದ ವಿರುದ್ಧ ಸಮರ ಸಾರಿರುವ ಟಿಟಿಪಿ, ನೆರೆಯ ಅಫ್ಘಾನಿಸ್ತಾನದ ಗಡಿಭಾಗದಲ್ಲಿ ತನ್ನ ನೆಲೆಗಳನ್ನು ಭದ್ರಪಡಿಸಿಕೊಂಡಿದೆ. ಪಾಕಿಸ್ತಾನದ ಬುಡಕಟ್ಟು ಪ್ರದೇಶಗಳ ವಿಲೀನವನ್ನು ರದ್ದುಗೊಳಿಸಬೇಕು ಹಾಗೂ ತಮ್ಮದೇ ಮಾದರಿಯ ಷರಿಯಾ ಕಾನೂನು ಜಾರಿಗೊಳಿಸಬೇಕು ಎಂಬುದು ಟಿಟಿಪಿಯ ಪ್ರಮುಖ ಬೇಡಿಕೆಯಾಗಿದೆ. ಈ ಉಗ್ರರು ಅಫ್ಘಾನ್ ನೆಲದಿಂದಲೇ ಪಾಕಿಸ್ತಾನದೊಳಗೆ ನುಗ್ಗಿ (ವಿಶೇಷವಾಗಿ ಖೈಬರ್ ಪಖ್ತುಂಖ್ವಾ ಮತ್ತು ಬಲೂಚಿಸ್ತಾನ ಪ್ರಾಂತ್ಯಗಳಲ್ಲಿ) ಸೇನಾ ನೆಲೆಗಳು ಮತ್ತು ಪೊಲೀಸ್ ಠಾಣೆಗಳ ಮೇಲೆ ಭೀಕರ ದಾಳಿಗಳನ್ನು ನಡೆಸುತ್ತಿದ್ದಾರೆ.



ಟಿಟಿಪಿ ಉಗ್ರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅಥವಾ ಅವರನ್ನು ತನಗೆ ಒಪ್ಪಿಸುವಂತೆ ಪಾಕಿಸ್ತಾನವು ಅಫ್ಘಾನ್ ತಾಲಿಬಾನ್ ಸರ್ಕಾರವನ್ನು ನಿರಂತರವಾಗಿ ಒತ್ತಾಯಿಸುತ್ತಿದೆ. ಆದರೆ, ತಮ್ಮದೇ ಸೈದ್ಧಾಂತಿಕ ಸಹೋದರರಾಗಿರುವ ಟಿಟಿಪಿ ವಿರುದ್ಧ ಕ್ರಮ ಕೈಗೊಳ್ಳಲು ಅಫ್ಘಾನ್ ತಾಲಿಬಾನ್ ಸಿದ್ಧವಿಲ್ಲ. ಬದಲಾಗಿ, ''ಭಯೋತ್ಪಾದನೆ ಪಾಕಿಸ್ತಾನದ ಆಂತರಿಕ ವಿಚಾರ, ನಮ್ಮ ನೆಲವನ್ನು ಯಾರ ವಿರುದ್ಧವೂ ಬಳಸಲು ನಾವು ಬಿಟ್ಟಿಲ್ಲ'' ಎಂದು ಅದು ನುಣುಚಿಕೊಳ್ಳುತ್ತಿದೆ. ಇದರಿಂದ ತೀವ್ರ ಹತಾಶೆಗೊಂಡಿರುವ ಪಾಕಿಸ್ತಾನ, ಅನಿವಾರ್ಯವಾಗಿ ಗಡಿಯಾಚೆಗಿನ (ಖೋಸ್ಟ್ ಮತ್ತು ಪಕ್ತಿಕಾ ಪ್ರಾಂತ್ಯಗಳು) ಟಿಟಿಪಿ ನೆಲೆಗಳ ಮೇಲೆ ಗುರಿಯಿಟ್ಟು ಬಾಂಬ್ ದಾಳಿ ನಡೆಸಲು ಮುಂದಾಗಿದೆ. ಇದು ಎರಡು ದೇಶಗಳ ನಡುವಿನ ರಾಜತಾಂತ್ರಿಕ ಬಿಕ್ಕಟ್ಟನ್ನು ತಾರಕಕ್ಕೇರಿಸಿದೆ.

ಈ ಸೇನಾ ಉದ್ವಿಗ್ನತೆಯ ಹಿಂದೆ ಐತಿಹಾಸಿಕ ಗಡಿ ವಿವಾದವೂ ಅಡಗಿದೆ. ಬ್ರಿಟಿಷರ ಕಾಲದಲ್ಲಿ ಎಳೆಯಲಾದ 2,640 ಕಿ.ಮೀ ಉದ್ದದ ಡ್ಯುರಾಂಡ್ ರೇಖೆಯನ್ನು ಅಫ್ಘಾನಿಸ್ತಾನ ಎಂದಿಗೂ ಅಂತಾರಾಷ್ಟ್ರೀಯ ಗಡಿ ಎಂದು ಅಧಿಕೃತವಾಗಿ ಒಪ್ಪಿಕೊಂಡಿಲ್ಲ. ಪಾಕಿಸ್ತಾನವು ಈ ಗಡಿಯಲ್ಲಿ ಬೇಲಿ ಹಾಕುತ್ತಿರುವುದನ್ನು ಅಫ್ಘಾನ್ ತಾಲಿಬಾನ್ ತೀವ್ರವಾಗಿ ವಿರೋಧಿಸುತ್ತಿದ್ದು, ಗಡಿ ಕಾವಲು ಪಡೆಗಳ ನಡುವಿನ ಗುಂಡಿನ ಚಕಮಕಿಗೂ ಇದು ಕಾರಣವಾಗುತ್ತಿದೆ.

ಬೇರೆಯವರಿಗೆ ಹಚ್ಚಲು ಸಾಕಿದ ಹಾವು, ಈಗ ತನ್ನನ್ನೇ ಕಚ್ಚಲು ಬರುತ್ತಿರುವ ನೈಜ ಸ್ಥಿತಿಯನ್ನು ಪಾಕಿಸ್ತಾನ ಎದುರಿಸುತ್ತಿದೆ. ತನ್ನ ಭೌಗೋಳಿಕ ರಾಜಕೀಯ ಹಿತಾಸಕ್ತಿಗಳಿಗಾಗಿ ದಶಕಗಳ ಕಾಲ ತಾನೇ ಪೋಷಿಸಿದ ಭಯೋತ್ಪಾದನೆಯು ಈಗ ಪಾಕಿಸ್ತಾನದ ಆರ್ಥಿಕತೆ ಮತ್ತು ಆಂತರಿಕ ಭದ್ರತೆಗೆ ಮಾರಕವಾಗಿ ಪರಿಣಮಿಸಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR